ಸಂಪುಟ : 9 ಸಂಚಿಕೆ 213 ಪುಟ : 4 ಬೆಲೆ: 3.00 ಮಂಗಳವಾರ ಅಕ್ಟೋಬರ್ 1 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 213 Pages : 4 Price : 3.00 Tuesday October 1 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಶಿವಾನುಭವ ಗೋಷ್ಠಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಡವೀಂದ್ರ ಸ್ವಾಮಿ ಮಠದಲ್ಲಿ ಅಕ್ಟೋಬರ್ 1ರಂದು ಸಂಜೆ 6–30 ಗಂಟೆಗೆ 328ನೇ ಮಾಸಿಕ ಶಿವಾನುಭವ ಜರುಗಲಿದೆ.


ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಸಮ್ಮುಖ ವಹಿಸುವರು. ಶಿವಾನುಭವ ಸಮಿತಿಯ ಅಧ್ಯಕ್ಷ ಡಾ. ಎಸ್.ಕೆ. ನಾಲತ್ವಾಡಮಠ ಅಧ್ಯಕ್ಷತೆ ವಹಿಸುವರು. ಜಲ್ಲಿಗೇರಿಯ ಶಿವಶರಣಮ್ಮ ಜ್ಞಾನಯೋಗಾಶ್ರಮದ ಪ್ರಧಾನ ಸೇವಕ ಚನ್ನಬಸವ ಅವರು ಪ್ರಾಣಾಯಾಮ ವಿಷಯವಾಗಿ ಉಪನ್ಯಾಸ ನೀಡುವರು.

ಮುಖ್ಯ ಅತಿಥಿಗಳಾಗಿ ಸೋಹನಲಾಲ ಶಹಾ, ಪ್ರಕಾಶ ಶಹಾ, ಪರಶುರಾಮ ನವಲೆ, ವಿಜಯಾಬಾಯಿ ನವಲೆ ಆಗಮಿಸುವರು. ವಾ.ಕ.ರ.ಸಾ ಸಂಸ್ಥೆಯ ಅಧ್ಯಕ್ಷ ಪೀರಸಾಬ ಕೌತಾಳ ಅವರಿಗೆ ಸನ್ಮಾನ ಜರುಗಲಿದೆ. ಅಕ್ಷತಾ ಹಿರೇಮಠ ಅವರಿಂದ ಸಂಗೀತ, ಸಿದ್ದಣ್ಣ ಜವಳಿ ಅವರಿಂದ ಪ್ರಾರ್ಥನೆ ಜರುಗಲಿದೆ.

ಹರೀಶಕುಮಾರ ಶಹಾ, ಶೈಲೇಂದ್ರಕುಮಾರ ಶಹಾ ಪ್ರಸಾದ ಸೇವೆ ವಹಿಸಿಕೊಂಡಿದ್ದು, ಶಿವಾನುಭವ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಿ.ಬಿ. ತೋಟಗೇರ ಸರ್ವರನ್ನೂ ಸ್ವಾಗತಿಸಿದ್ದಾರೆ.

## ಭಗವಾನ್ ಮಾತಿಗೆ ಮಹತ್ವ ಕೊಡಬೇಡಿ

■ವಿಜಯಸಾಕ್ಷಿ ಸುದ್ದಿ, ಗದಗ



ಪ್ರೊ.ಕೆ. ಎಸ್ ಭಗವಾನ್ ತಾಯಿ ಚಾಮುಂಡೇಶ್ವರಿ ವಿಚಾರದಲ್ಲಿ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಅವರ ಮಾತಿಗೆ ಯಾರೂ ಮಹತ್ವ ಕೊಟ್ಟಿಲ್ಲ, ಕೊಡಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದ್ದಾರೆ.

ಗದಗದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರೊ. ಭಗವಾನ್ ಅವರು ಹೆಸರಿಗೆ ತಕ್ಕಂಗೆ ಭಗವಂತನ ಮೇಲೆ ನಂಬಿಕೆ ಇಲ್ಲವೆಂದರೆ, ಭಗವಾನ್ ಎಂದು ಹೆಸರು ಇಟ್ಟಿಕೊಂಡಿದ್ದೇ ಅಪಾರ್ಥವಾಗಿದೆ ಎಂದು ಹೇಳಿದರು.

ಒಂದು ಧರ್ಮದ ವಿರುದ್ಧ ಮಾತನಾಡುವುದು ಯಾವುದೇ ಮಾನವೀಯ ಧರ್ಮವಲ್ಲ. ಚಾಮುಂಡೇಶ್ವರಿ ಕಾಲ್ಪನಿಕ ಎಂದು ಹೇಳುತ್ತಾರೆ. ಚಾಮುಂಡೇಶ್ವರಿ ಕಾಲ್ಪನಿಕ ಅಂದರೆ, ಮಹಿಷಾಸುರನೂ ಕಾಲ್ಪನಿಕವೇ? ಮಹಿಷಾಸುರನ ಆರಾಧನೆ ಮಾಡುತ್ತಾರೆ. ಇತರಹ ದ್ವಂದ್ವ ವಿಪರ್ಯಾಸದಿಂದ ಜನರ ದಾರಿ ತಪ್ಪಿಸುವ ಕೆಲಸ ಮಾಡುತ್ತಾರೆ. ಇದಕ್ಕೆ ಯಾರೂ ಮಹತ್ವ ಕೊಡಬಾರದು. ವಾಸ್ತವ ಅಂಶ ಗೊತ್ತಿದ್ದರೂ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಸಂಸದ ಬೊಮ್ಮಾಯಿ ಆರೋಪಿಸಿದರು.

## ಬ್ಲಾಕ್ ಹಂತದ ಶಿಕ್ಷಣ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನ ಶಾಲಾ ಶಿಕ್ಷಣ ಇಲಾಖೆಯ ಗದಗ ಶಹರ ವಲಯದ ಬ್ಲಾಕ್ ಹಂತದ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಅಕ್ಟೋಬರ್ 4 ರಂದು ಏರ್ಪಡಿಸಲಾಗುವುದು.

ವಲಯದ ಎಲ್ಲ ಶಿಕ್ಷಕರಿಗೆ ಈ ಮೂಲಕ ತಿಳಿಸಿವುದೇನೆಂದರೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಿಂದ ಕಚೇರಿಯಿಂದ ಇತ್ಯರ್ಥ ಆಗಬೇಕಾದ ಯಾವುದಾದರೂ ಪ್ರಕರಣಗಳು ಇದ್ದಲ್ಲಿ ಹಾಗೂ ಶೈಕ್ಷಣಿಕ ಬೋಧನೆ ಕಲಿಕೆಗೆ ಸಂಬಂಧಿಸಿದಂತೆ ಕುಂದು ಕೊರತೆಗಳಿಗೆ ಸೌಹಾರ್ದವಾಗಿ ಶೀಘ್ರವಾಗಿ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ನಿಮ್ಮ ಅಹವಾಲುಗಳು ಏನಾದರೂ ಇದ್ದಲ್ಲಿ ಅಕ್ಟೋಬರ್ 2 ರ ಸಂಜೆ 5.30 ರೊಳಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಹರ ವಲಯ, ಗದಗ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಜೊತೆಗೆ ಶಿಕ್ಷಕರಿಗೆ ಅವರ ಸೇವಾ ಪುಸ್ತಕ ಪರಿಶೀಲನೆಗಾಗಿ ನೀಡಲಾಗುವುದು. ಏನಾದರೂ ವ್ಯತ್ಯಾಸಗಳಿದ್ದಲ್ಲಿ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಪತ್ರಿಕಾಗೋಷ್ಠಿಯಲ್ಲಿ ದಸರಾ ಧರ್ಮ ಸಮ್ಮೇಳನದ ಸ್ವಾಗತ ಸಮಿತಿ ಗೌರವಾಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಮಾಹಿತಿ

# ರಂಭಾಪುರಿ ಶ್ರೀಗಳ ಶರನ್ನವರಾತ್ರಿ ಅ.3ರಿಂದ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕು ಅಬ್ಬಿಗೇರಿ ಗ್ರಾಮದಲ್ಲಿ ಬಾಳೆಹೊನ್ನೂರು ರಂಭಾಪುರಿ ಶ್ರೀಗಳ ಶರನ್ನವರಾತ್ರಿ, ದಸರಾ ಧರ್ಮ ಸಮ್ಮೇಳನ ಅ.3ರಿಂದ ನಡೆಯಲಿದೆ ಎಂದು ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ. 3ರಂದು ಸಂಜೆ 7 ಗಂಟೆಗೆ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನ ಉದ್ಘಾಟನೆ ಜರುಗಲಿದೆ. ಸಾನ್ನಿಧ್ಯವನ್ನು ರಂಭಾಪುರಿ ಶ್ರೀಗಳು ವಹಿಸುವರು. ಕಾರ್ಯಕ್ರಮವನ್ನು ಕೇಂದ್ರ ಸಚಿವ ವಿ.ಸೋಮಣ್ಣ ಉದ್ಘಾಟಿಸುವರು. ಅತಿಥಿಗಳಾಗಿ ನಾಡಿನ ಹಲವು ಗಣ್ಯರು ಆಗಮಿಸಲಿದ್ದಾರೆ. ಒಟ್ಟು 9 ದಿನಗಳ ಕಾಲ ನಡೆಯುವ ದಸರಾ ದರ್ಬಾರ, ಧರ್ಮ ಸಮ್ಮೇಳನದಲ್ಲಿ ಉಪನ್ಯಾಸ, ಗೌರವ ರಕ್ಷೆ, ಗುರು ರಕ್ಷೆಯಂತಹ ಕಾರ್ಯಕ್ರಮಗಳು ಜರುಗಲಿವೆ. ಅ.4ರ ಸಂಜೆ 7ಕ್ಕೆ 'ರಂಭಾಪುರಿ ಬೆಳಗು' ಕೃತಿ ಬಿಡುಗಡೆ ಜರುಗಲಿದ್ದು, ಸಹಕಾರ ಸಚಿವ ಕೆ.ಎನ್. ರಾಜಣ್ಣ, ಗಣಿ ಮತ್ತು ಭೂ ವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಚಿತ್ರನಟ ದೊಡ್ಡಣ್ಣ ಪಾಲ್ಗೊಳ್ಳುವರು.

ಅ. 5ರಂದು 'ಸಾಹಿತ್ಯ ಸಿರಿ' ಪ್ರಶಸ್ತಿ ಪ್ರದಾನ ನಡೆಯಲಿದ್ದು, ಗೃಹ ಸಚಿವ ಡಾ. ಜಿ.ಪರಮೇಶ್ವರ, ಮಹಿಳಾ ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಸಂಸದ ಬಿ.ವೈ. ರಾಘವೇಂದ್ರ ಆಗಮಿಸುವರು. ಅ. 6ರಂದು ಸಂಜೆ 7ಕ್ಕೆ ಜರುಗುವ ಕಾರ್ಯಕ್ರಮದಲ್ಲಿ ರಂಭಾಪುರಿ 'ಯುವಸಿರಿ' ಪ್ರದಾನ ನಡೆಯಲಿದ್ದು, ಸಂಸದ ಜಗದೀಶ ಶೆಟ್ಟರ, ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಅನ್ವರಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ಪದ್ಮಶ್ರೀ ವಿಜಯ ಸಂಕೇಶ್ವರ ಆಗಮಿಸುವರು.



> ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಅಬ್ಬಿಗೇರಿ ಹಿರೇಮಠ ಮತ್ತು ಸಿದ್ದರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು ಮಾತನಾಡಿ, ಈ ಕಾರ್ಯಕ್ರಮವನ್ನು ಯಶಸ್ವಿಯಾಗಿಸುವ ನಿಟ್ಟಿನಲ್ಲಿ ಸಮಾಜದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ಸಾಮಾಜಿಕ, ಶೈಕ್ಷಣಿಕ ಬೆಳವಣಿಗೆ ಪೂರಕ ಯೋಜನೆಗಳನ್ನು ರೂಪಿಸಲಾಗಿದೆ. ಕೃಷಿ ಮೇಳ, ಉಚಿತ ಆರೋಗ್ಯ ತಪಾಸಣೆ, ಮಕ್ಕಳ ಆರೋಗ್ಯ, ಕಣ್ಣಿನ ತಪಾಸಣೆಗಾಗಿ ಸುಸಜ್ಜಿತವಾದ ತಾತ್ಕಾಲಿಕ ಆಸ್ಪತ್ರೆ ಸ್ಥಾಪನೆ ಮಾಡಲಾಗಿದೆ. ಪ್ರತಿ ದಿನ 25 ಸಾವಿರಕ್ಕಿಂತಲೂ ಅಧಿಕ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು.

> ಅ. 10ರಂದು ಸಾಧನ ಸಿರಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಬಳ್ಳಾರಿ ಶಾಸಕ ಭರತ–ರೆಡ್ಡಿ ಸೇರಿದಂತೆ ಅನೇಕರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. 'ಹಾಸ್ಯದಲ್ಲಿ ನೈತಿಕ ಮೌಲ್ಯಗಳು' ಕುರಿತು ಗಂಗಾವತಿ ಪ್ರಾಣೇಶ್ ಉಪನ್ಯಾಸ ನೀಡುವರು. ಅ. 11ರಂದು ಸಂಜೆ 7ಕ್ಕೆ ರುದ್ರಗಣಾಧಿಪ ವೀರಭದ್ರ ಹಾಗೂ ಶ್ರೀಪೀಠದ ವಾರ್ತಾ ಸಂಕಲನ ಬಿಡುಗಡೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ವಿ.ಪ ಸದಸ್ಯ ಸಿ.ಟಿ. ರವಿ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳುವರು. ನಂತರ ಗೌರವ ಶ್ರೀರಕ್ಷೆ, ಉಪನ್ಯಾಸ, ಗುರು ರಕ್ಷೆ ಕಾರ್ಯಕ್ರಮಗಳಿವೆ. ಅ 12ರಂದು ಸಂಜೆ 4.30ಕ್ಕೆ ವಿಜಯ ದಶಮಿಯ ಶಮೀಸೀಮೋಲ್ಲಂಘನ, ಸಿಂಹಾಲನಾರೋಹಣ, ಶಾಂತಿ ಸಂದೇಶ ಕಾರ್ಯಕ್ರಮ ಜರುಗಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಮಾಹಿತಿ ನೀಡಿದರು.

▸▸3ನೇ ಪುಟಕ್ಕೆ

### ಗಜೇಂದ್ರಗಡಕ್ಕೆ ಆಗಮಿಸಿದ ಕನ್ನಡ ರಥವನ್ನು ಸ್ವಾಗತಿಸಿದ ಶಾಸಕ ಜಿ.ಎಸ್. ಪಾಟೀಲ

# ಕನ್ನಡ ಕೇವಲ ಭಾಷೆಯಲ್ಲ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ರಾಜ್ಯದ ನೆಲ, ಜಲ ಹಾಗೂ ಭೂಮಿಯ ರಕ್ಷಣೆ ವಿಚಾರದಲ್ಲಿ ರಾಜಿ ಇಲ್ಲದ ಆಡಳಿತ ನಡೆಸುತ್ತಿರುವ ರಾಜ್ಯ ಸರ್ಕಾರ ಪ್ರತಿ ಕನ್ನಡಿಗರ ಅಸ್ಮಿತೆಗೆ ಧಕ್ಕೆ ಬಾರದಂತೆ ಕಾರ್ಯಕ್ರಮಗಳನ್ನು ಜಾರಿಗೆ ತರುತ್ತಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಮಂಡ್ಯದಲ್ಲಿ ಡಿಸೆಂಬರ್‌ನಲ್ಲಿ ಜರುಗಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಯುಕ್ತ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥವನ್ನು ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದ ಬಳಿ ಸ್ವಾಗತ ಕೋರಿ ಅವರು ಮಾತನಾಡಿದರು.

ಕನ್ನಡ ಕೇವಲ ಭಾಷೆಯಲ್ಲ. ತನ್ನದೇ ಆದ ನೆಲ, ಜಲ ಹಾಗೂ ಸಂಸ್ಕೃತಿಯನ್ನು ಒಳಗೊಂಡಿದೆ. ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣಗೊಂಡು 50 ವರ್ಷ ಪೂರ್ಣಗೊಳ್ಳುವುದರ ಜೊತೆಗೆ ಡಿ.20ರಿಂದ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡ ಜ್ಯೋತಿ ರಥವು 87 ದಿನಗಳ ಕಾಲ ರಾಜ್ಯದ 240 ತಾಲೂಕು ಕೇಂದ್ರಗಳಲ್ಲಿ ಸಂಚರಿಸುತ್ತಿದೆ. ಇದರ ಭಾಗವಾಗಿ ಗಜೇಂದ್ರಗಡ ತಾಲೂಕಿಗೆ ಆಗಮಿಸಿದ ಸಂದರ್ಭದಲ್ಲಿ ಕನ್ನಡಾಭಿಮಾನಿಗಳು ಹೆಮ್ಮೆಯಿಂದ ಪಾಲ್ಗೊಂಡಿದ್ದಾರೆ ಎಂದರು.

ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದ ಬಳಿ ಆಗಮಿಸಿದ ಕನ್ನಡ ರಥಕ್ಕೆ ಅದ್ಧೂರಿ ಸ್ವಾಗತ ಕೋರಿದ ಬಳಿಕ ಶಾಸಕ ಜಿ.ಎಸ್. ಪಾಟೀಲ, ತಹಸೀಲ್ದಾರ್ ಕಿರಣಕುಮರ ಕುಲಕರ್ಣಿ, ಮೈಸೂರ ಮಠದ ವಿಜಯಮಹಾಂತ ಸ್ವಾಮೀಜಿ, ಟಕ್ಕೇದ ದರ್ಗಾದ ನಿಜಾಮುದ್ದೀನಶಾ ಆಶ್ರಫಿ ಮಕಾನದಾರ ಸೇರಿ ಪುರಸಭೆ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಆಶಾ ಕಾರ್ಯಕರ್ತರು, ಸಾಹಿತಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಸೇರಿ ಅನೇಕರು ಕನ್ನಡ ರಥದೊಂದಿಗೆ ಹೆಜ್ಜೆ ಹಾಕುತ್ತಾ ಬಸ್ ನಿಲ್ದಾಣ, ಕಾಲಕಾಲೇಶ್ವರ ವೃತ್ತ, ಎಪಿಎಂಸಿ ಮಾರ್ಗವಾಗಿ ರೋಣ ಪಟ್ಟಣಕ್ಕೆ ರಥವನ್ನು ಬೀಳ್ಕೊಟ್ಟರು.

ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ, ಸಿದ್ದಪ್ಪ ಬಂಡಿ, ಎಚ್.ಎಚ್. ಸೋಂಪುರ, ಅಶೋಕ ಬಾಗಮಾರ, ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾಧ್ಯಕ್ಷ ಎ.ಪಿ. ಗಾಣಿಗೇರ, ಪುರಸಭೆ ಸದಸ್ಯರಾದ ಶಿವರಾಜ ಘೋರ್ಪಡೆ, ರಾಜು ಸಾಂಗ್ಲಿಕರ, ಮಾಜಿ ಸದಸ್ಯ ಎಂ.ಎಸ್. ಹಡಪದ, ಎಫ್.ಎಸ್. ಕರಿದುರಗನವರ, ಬಸವರಾಜ ಹೂಗಾರ, ಸಿದ್ದಣ್ಣ ಚೋಳಿನ, ಶರಣು ಪೂಜಾರ, ತಾ.ಪಂ ಇಒ ಬಸವರಾಜ ಬಡಿಗೇರ, ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ, ಗಣೇಶ ಕೊಡಕೇರಿ, ರಾಘವೇಂದ್ರ ಮಂತಾ, ಪಿಎಸ್ಐ ಸೋಮಗೌಡ ಗೌಡ್ರ ಮುಂತಾದವರು ಭಾಗವಹಿಸಿದ್ದರು.



> ರಾಜ್ಯದಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಅತ್ಯಂತ ಗಟ್ಟಿ ಧ್ವನಿಯಲ್ಲಿ ಮಾಡುತ್ತಾ ಬಂದಿರುವ ಸಾಹಿತ್ಯ ಪರಿಷತ್ ಕೆಲಸವು ಅನನ್ಯ ಹಾಗೂ ಅಮಘೋವಾದದ್ದು. ರಾಜ್ಯ ಸೇರಿ ಜಿಲ್ಲೆಯಲ್ಲಿ ಅನೇಕ ಅಮೂಲ್ಯವಾದ ಇತಿಹಾಸವನ್ನು ಹೊರತಗೆದು ಯುವ ಸಮೂಹಕ್ಕೆ ಪರಿಚಯಿಸುವ ಕೆಲಸವನ್ನು ಮಾಡುತ್ತ ಬಂದಿದೆ. ಶೀಘ್ರದಲ್ಲೇ ಪಟ್ಟಣದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲಾಗುವುದು ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

### ಗ್ರಾಮೀಣಾಭಿವೃದ್ಧಿ ಇಲಾಖೆ ನೌಕರರಿಂದ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯ

# ಅನಿರ್ದಿಷ್ಟಾವಧಿ ಧರಣಿ ಅ.4ರಿಂದ



■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ನೌಕರರ ಎಲ್ಲ ವೃಂದಗಳ ಸಂಘ ಹಾಗೂ ಗ್ರಾ.ಪಂ ಸದಸ್ಯರ ಒಕ್ಕೂಟದ ನೇತೃತ್ವದಲ್ಲಿ ಬಡ್ತಿ, ಗ್ರಾ.ಪಂಗಳ ಗ್ರೇಡ್‌ಗಳನ್ನು ಹೆಚ್ಚಿಸುವುದು, ಬಡ್ತಿಯಲ್ಲಿನ ಸಮಸ್ಯೆ ನಿವಾರಣೆ, ನೇಮಕಾತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅ. 4ರಿಂದ ಅನಿರ್ಧಿಷ್ಟಾವಧಿ ಮುಷ್ಕರ ಆರಂಭಿಸಲಾಗುವುದು ಎಂದು ಪಿಡಿಒ ಸಂಘದ ಜಿಲ್ಲಾಧ್ಯಕ್ಷ ಕುಮಾರ ಪೂಜಾರ ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರತಿಭಟನೆಯ ಸಂದರ್ಭದಲ್ಲಿ ಗ್ರಾ.ಪಂಗಳಲ್ಲಿ ತುರ್ತು ಸೇವೆ ಹೊರತುಪಡಿಸಿ ಇತರೆ ಸೇವೆಗಳು ಸ್ಥಗಿತಗೊಳ್ಳಲಿವೆ. ಪಂಚಾಯತ ಅಭಿವೃದ್ಧಿ ಅಕಾರಿ ಹುದ್ದೆಯನ್ನು ಗೆಜೆಟೆಡ್ ಗ್ರೂಪ್ ಬಿ ವೃಂದಕ್ಕೆ ಮೇಲ್ದರ್ಜೆಗೇರಿಸುವಂತೆ ಬೇಡಿಕೆ ಇದ್ದರೂ ಅದನ್ನು ಪರಿಗಣಿಸದೇ ಪ್ರಸ್ತುತ ಇರುವ 6021 ಹುದ್ದೆಗಳಲ್ಲಿಯೇ 1500 ಹುದ್ದೆಗಳನ್ನು ಕಡಿಮೆ ಮಾಡಿ ಹಿರಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ನಿಯಮ ಬಾಹಿರವಾಗಿ ಸೃಷ್ಟಿಸಲಾಗಿದೆ. ಇಲಾಖೆ ಇಂತಹ ಎಡವಟ್ಟುಗಳನ್ನು ಮಾಡಿ ಪಿಡಿಓಗಳಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು.

> ಗ್ರಾ.ಪಂ ಸದಸ್ಯರ ಒಕ್ಕೂಟದ ಜಿಲ್ಲಾಧ್ಯಕ್ಷ ಸೋಮರೆಡ್ಡಿ ನಡವೂರು ಮಾತನಾಡಿ, ಸರ್ಕಾರಿಂದ ಗ್ರಾ.ಪಂಗಳಿಗೆ ಸೂಕ್ತ ಸಹಕಾರ ಸಿಗುತ್ತಿಲ್ಲ. ಪಿಡಿಓಗಳಿಗೆ ಅನಾನುಕೂಲತೆ ಸೃಷ್ಟಿಸುತ್ತಿರುವುದರಿಂದ ಸದಸ್ಯರಿಗೂ ಕಾರ್ಯ ನಿರ್ವಹಿಸಲು ತೊಂದರೆಯಾಗುತ್ತಿದೆ. ಕಾರಣ, ಪಿಡಿಓಗಳ ರಾಜ್ಯ ಮಟ್ಟದ ಪ್ರತಿಭಟನೆಗೆ ಬೆಂಬಲ ನೀಡುತ್ತಿದ್ದೇವೆ ಎಂದರು.

▸▸3ನೇ ಪುಟಕ್ಕೆ

### ಗದಗ ಜಿಲ್ಲಾ ಮಟ್ಟದ 'ಉದ್ಯೋಗ ಮೇಳ' ಉದ್ಘಾಟಿಸಿದ ಸಂಸದ ಬಸವರಾಜ ಬೊಮ್ಮಾಯಿ

# ಸಾಧಿಸುವ ಛಲವಿದ್ದರೆ ಮಾತ್ರ ಯಶಸ್ಸು

■ವಿಜಯಸಾಕ್ಷಿ ಸುದ್ದಿ, ಗದಗ

ಯಾವ ದೇಶದಲ್ಲಿ ಕೌಶಲ್ಯ ಇರುವ ಯುವಕರಿರುತ್ತಾರೆಯೋ ಆ ದೇಶಕ್ಕೆ ಬಡತನವಿಲ್ಲ. ಭಾರತ ದೇಶದಲ್ಲಿ ಕೌಶಲ್ಯದ ಕೊರತೆ ಇದೆ. ಅದಕ್ಕಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ವಿಶೇಷವಾಗಿರುವ ಕೌಶಲ್ಯ ಅಭಿವೃದ್ಧಿ ಇಲಾಖೆ ತೆರೆದು ತರಬೇತಿ ನೀಡಲು ಕ್ರಮ ಕೈಗೊಂಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಗದಗ ಕೆಎಲ್ಇ ಸಂಸ್ಥೆಯ ಜೆ.ಟಿ. ಮಹಾವಿದ್ಯಾಲಯದಲ್ಲಿ ಉದ್ಯೋಗ ಮಾಹಿತಿ ಹಾಗೂ ತರಬೇತಿ ಕೇಂದ್ರ, ಎಸ್.ಆರ್. ಬೊಮ್ಮಾಯಿ ಟ್ರಸ್ಟ್ ಹಾಗೂ ಬಳಗದ ಸಂಯುಕ್ತಾಶಯದಲ್ಲಿ ಎಸ್.ವಿ. ಸಂಕನೂರು ಅಭಿಮಾನಿ ಸೋಮವಾರ ಏರ್ಪಡಿಸಿದ್ದ ಗದಗ ಜಿಲ್ಲಾ ಮಟ್ಟದ 'ಉದ್ಯೋಗ ಮೇಳ' ಉದ್ಘಾಟಿಸಿ ಅವರು ಮಾತನಾಡಿದರು.

ನನಗೆ ಕೌಶಲ್ಯ ಅಭಿವೃದ್ಧಿ, ಕಾರ್ಮಿಕ ಹಾಗೂ ಟೆಕ್ಸ್‌ಟೈಲ್ ಕ್ಷೇತ್ರದಲ್ಲಿ ಉದ್ಯೋಗ ನೀಡುವ ಇಲಾಖೆಗಳ ಜವಾಬ್ದಾರಿಯನ್ನು ಪಧಾನಿ ನೀಡಿದ್ದಾರೆ. ಪ್ರಧಾನ ಮಂತ್ರಿಯ ಕನಸು ಕೌಶಲ್ಯ ಭರಿತ ಭಾರತ ಮಾಡುವ ನಿಟ್ಟಿನಲ್ಲಿ ಉದ್ಯೋಗ ಸೃಷ್ಟಿಗೆ ಪೂರಕವಾದ ವರದಿಯನ್ನು ನೀಡಲು ನಾನು ಶ್ರಮವಹಿಸುತ್ತೇನೆ ಎಂದರು.

ಇಲ್ಲಿ ಸುಮಾರು 2 ಸಾವಿರ ವಿದ್ಯಾರ್ಥಿಗಳು ಬಂದಿದ್ದಾರೆ. ಸಂಸ್ಥೆಗಳು ಬಯಸುವ ಉದ್ಯೋಗಕ್ಕೂ ನಾವು ಕಲಿಯುವುದಕ್ಕೂ ವ್ಯತ್ಯಾಸ ಇದೆ. ಅದನ್ನು ಸರಿಪಡಿಸಲು ಪದವಿ ಪಡೆಯುವ ಮೊದಲೇ ಕೌಶಲ್ಯ ತರಬೇತಿ ಪಡೆಯಬೇಕು. ತಾಂತ್ರಿಕ ತರಬೇತಿ, ಕೌಶಲ್ಯ ತರಬೇತಿ ಪಡೆಯಬೇಕು ಎಂದು ಹೇಳಿದರು.




> ಈಗೆಲ್ಲ ಇಂಗ್ಲಿಷ್ ಕೇಳುತ್ತಾರೆ. ಬಹುತೇಕ ವಿದ್ಯಾರ್ಥಿಗಳು ಸಮಾಜ ವಿಜ್ಞಾನ, ಭೂಗೋಳದಲ್ಲಿ ಹೆಚ್ಚು ಅಂಕ ಪಡೆಯುತ್ತಾರೆ. ಆದರೆ, ಗಣಿತ ವಿಷಯ ಬಂದಾಗ 35 ಅಂಕ ಪಡೆದು ಬರುತ್ತಾರೆ. ಶಿಕ್ಷಣ ವ್ಯವಸ್ಥೆ ಬದಲಾಗಬೇಕು. ವೈಜ್ಞಾನಿಕ ಜ್ಞಾನ ಬರುವಂತಹ ಶಿಕ್ಷಣ ನೀಡಬೇಕು. ಒಂದು ಕೋಟಿ ಯುವಕರಿಗೆ ಉದ್ಯೋಗ ನೀಡುವ ಯೋಜನೆಯನ್ನು ಕೇಂದ್ರ ಸರ್ಕಾರ ಮಾಡಿದೆ. ಕೇಂದ್ರ ಸರ್ಕಾರವೇ ಸಂಬಳ ನೀಡಲಿದೆ. ಹೆಚ್ಚಿನ ಯುವಕರು ಅದರ ಲಾಭ ಪಡೆದುಕೊಳ್ಳಬೇಕು.
>
> – ಬಸವರಾಜ ಬೊಮ್ಮಾಯಿ.
> ಸಂಸದರು, ಹಾವೇರಿ–ಗದಗ.

> ದೇಶದಲ್ಲಿ 2014ರಲ್ಲಿ 42 ಸಾವಿರ ಕೊರೋಡ್‌ಪತಿಗಳು ಒಂದು ಕೋಟಿಗಿಂತ ಹೆಚ್ಚು ಆದಾಯ ಪಡೆಯುತ್ತಿದ್ದರು. ಈಗ ಮೂರು ಲಕ್ಷಕ್ಕೂ ಹೆಚ್ಚು ಜನರು ಒಂದು ಕೋಟಿಗಿಂತಲೂ ಹೆಚ್ಚು ಆದಾಯ ಪಡೆಯುತ್ತಿದ್ದಾರೆ. ಆರ್ಥಿಕತೆಯಲ್ಲಿ ಯಾವುದೇ ಮ್ಯಾಜಿಕ್ ಇಲ್ಲ. ಕಠಿಣ ಪರಿಶ್ರಮ, ಪ್ರಾಮಾಣಿಕ ಪಯತ್ನ, ದೃಢ ಸಂಕಲ್ಪ, ಸಾಧನೆ ಮಾಡುವ ಛಲ ಇದ್ದರೆ ಮಾತ್ರ ಯಶಸ್ಸು ಸಿಗುತ್ತದೆ. ಯುವಕರು ಮನಸು ಮಾಡಿ ಎತ್ತರಕ್ಕೆ ಹಾರಬೇಕು. ಇಡೀ ಭೂಮಂಡಲ ನಿಮ್ಮದಿದೆ. ಆಕಾಶ ನಿಮ್ಮದಿದೆ. ನಿವೂ ಒಳ್ಳೆಯ ಹೆಸರು ಗಳಿಸಿ, ದೇಶಕ್ಕೂ ಒಳ್ಳೆಯ ಹೆಸರು ತನ್ನಿ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

▸▸3ನೇ ಪುಟಕ್ಕೆ

# ಇಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಜಿಲ್ಲೆಯಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವಾನಿರತ ಸ್ವಯಂ ಸೇವಾ ಸಂಸ್ಥೆ ಮತ್ತು ಸಂಘಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ – 2024 ಯನ್ನು "ಘನತೆಯ ಬಾಳಿನೊಂದಿಗೆ ವಯೋಪಕ್ವತೆ ; ವಿಶ್ವದಾದ್ಯಂತ ಹಿರಿಯ ಜೀವಿಗಳಿಗೆ ಆರೈಕೆ ಮತ್ತು ಬೆಂಬಲ ವ್ಯವಸ್ಥೆಗಳನ್ನು ಸದೃಢಗೊಳಿಸುವುದರ ಮಹತ್ವ" ಘೋಷ ವಾಕ್ಯದೊಂದಿಗೆ ಅಕ್ಟೋಬರ್ 01 ರಂದು ಬೆಳಿಗ್ಗೆ 11 ಘಂಟೆಗೆ ಗದಗ ಜಿಲ್ಲಾಡಳಿತ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರಾದ ಶ್ರೀಮತಿ ಲಕ್ಷ್ಮಿ ಹೆಬ್ಬಾಳಕರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ-ಬೆಟಗೇರಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ ಅವರು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರಗಳ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ ಆಗಮಿಸುವರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಸ್ವಾಗತ ಕೋರಿದ್ದಾರೆ.

## ಸಾರ್ವಜನಿಕರು ಇ-ಆಸ್ತಿ ಸಂಯೋಜನೆಯ ಸದುಪಯೋಗ ಪಡೆಯಲು ಜಿಲ್ಲಾಧಿಕಾರಿ ಕರೆ

# ಇ-ಆಸ್ತಿ, ಕಾವೇರಿ ತಂತ್ರಾಂಶ ಸಂಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಜಮೀನಿನ ನೋಂದಣಿಗೆ ಭೂಮಿ ತಂತ್ರಾಂಶದೊಂದಿಗೆ 2006ರಿಂದಲೇ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶವನ್ನು ಸಂಯೊಜನೆ ಮಾಡಲಾಗಿದೆ. ಜಮೀನಿನ ಸರ್ವೆ ನಕ್ಷೆ (ಸ್ಕೆಚ್)-ನಮೂನೆ 11ಇ ಇರುವ ಮೋಜಣಿ ತಂತ್ರಾಂಶದೊಂದಿಗೆ ಹಾಗೂ ಕಾವೇರಿ ತಂತ್ರಾಂಶವನ್ನು ದಿನಾಂಕ 05-10-2016ರಿಂದ ಸಂಯೋಜನೆ ಮಾಡಲಾಗಿದೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೃಷಿಯೇತರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗಾಗಿ ಇ-ಸ್ವತ್ತು ತಂತ್ರಾಂಶವನ್ನು ದಿನಾಂಕ 18-07-2014ರ ಸುತ್ತೋಲೆಯಂತೆ ಸಂಯೋಜನೆಗೊಳಿಸಲಾಗಿದೆ.

ಈ ಮೇಲೆ ಕಾಣಿಸಿದ ಆಸ್ತಿಗಳನ್ನು ಹೊರತುಪಡಿಸಿ ಅಂದರೆ ನಗರ ಪ್ರದೇಶಗಳಲ್ಲಿನ ಕೃಷಿಯೇತರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಆಸ್ತಿ (ತಂತ್ರಾಂಶ)ವನ್ನು ರೂಪಿಸಿದ್ದು ಇ-ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ-2.0 ತಂತ್ರಾಂಶದೊಂದಿಗೆ ಪ್ರಾಯೋಗಿಕವಾಗಿ ರಾಮನಗರ ಮತ್ತು ಕನಕಪುರದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕಾವೇರಿ-2.0 ತಂತ್ರಾಂಶದೊಂದಿಗೆ ಸಂಯೋಜನೆ ಮಾಡಿ ದಿನಾಂಕ 29-01-2020ರಿಂದ ನೋಂದಣಿ ಮಾಡುತ್ತಿರುವುದು ಯಶಸ್ವಿಯಾಗಿದೆ.



ನಗರಾಭಿವೃದ್ಧಿ ಇಲಾಖೆಯು ಗದಗ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ-ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ಸಮ್ಮತಿ ನೀಡಿರುತ್ತಾರೆ. ಗದಗ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ಥಿಗಳ ನೋಂದಣಿಯನ್ನು ಇ-ಆಸ್ತಿ ತಂತ್ರಾಂಶದಿಂದ ಕಡ್ಡಾಯವಾಗಿ ಮಾಹಿತಿ ಪಡೆದು ನೋಂದಾಯಿಸಲು ಇ-ಆಸ್ತಿ ತಂತ್ರಾಂಶವನ್ನು ಕಾವೇರಿ-2 ತಂತ್ರಾಂಶದೊಂದಿಗೆ ದಿನಾಂಕ 23-09-2024ರಿಂದ ಜಾರಿಗೆ ಬರುವಂತೆ ಸರ್ಕಾರದ ಆದೇಶದ ಮೂಲಕ ಆದೇಶಿಸಲಾಗಿದೆ. ದಿನಾಂಕ 7-10-2024ರಿಂದ ಗದಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪ ನೋಂದಣಿ ಕಛೇರಿಗಳಲ್ಲಿ ನಗರ ಸ್ಥಳಿಯ ಸಂಸ್ಥೆಗಳ ಆಸ್ತಿಯನ್ನು ನೋಂದಾಯಿಸಲು ಆಸ್ತಿಯ ಮಾಹಿತಿಯನ್ನು ಕಡ್ಡಾಯವಾಗಿ ಇ-ಆಸ್ತಿ ತಂತ್ರಾಂಶದಿಂದಲೇ ಪಡೆಯಬೇಕಿರುತ್ತದೆ.

ಈ ಎಲ್ಲ ಪ್ರಮುಖ ಕಾರಣಗಳಿಂದ ಸಾರ್ವಜನಿಕರು ಇ-ಆಸ್ತಿ ಸಂಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳುವಂತೆ ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಇ-ಖಾತಾ ಸಂಯೋಜನೆಯಿಂದ ಸಾರ್ವಜನಿಕರಿಗೆ ಹಲವು ಉಪಯೋಗಗಳಿವೆ. ಇ-ಆಸ್ತಿ ತಂತ್ರಾಂಶದಿಂದಾಗಿ ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯುವುದು, ಇ-ಖಾತಾದಿಂದ ಮಾತ್ರ ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯ. ನೈಜ ಮಾಲೀಕರಿಗೆ ವಂಚಿಸಿ ಬೇರೆಯವರಿಂದ ಸ್ವತ್ತುಗಳ ನೋಂದಣಿಯನ್ನು ತಪ್ಪಿಸುವುದು. ಸ್ವತ್ತುಗಳ ಖರೀದಿದಾರರಿಗೆ ಸ್ವತ್ತಿನ ನೈಜ ಮಾಲೀಕರನ್ನು ಗುರುತಿಸುವುದು. ಭವಿಷ್ಯದಲ್ಲಿ ಉಂಟಾಗಬಹುದಾದ ವ್ಯಾಜ್ಯ, ಕಾನೂನು ತೊಂದರೆಗಳನ್ನು ತಪ್ಪಿಸುವುದು ಸಾಧ್ಯವಾಗಲಿದೆ.

## ಪೋಷಣ್ ಮಾಸಾಚರಣೆ, ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮ

# ಪೌಷ್ಟಿಕ ಆಹಾರಕ್ಕೆ ಆದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮಕ್ಕಳು ಈ ದೇಶದ ಸಂಪತ್ತು. ಮಕ್ಕಳ, ಗರ್ಭಿಣಿಯರ ಹಿತಕ್ಕಾಗಿ ಸರ್ಕಾರದ ಯೋಜನೆಗಳನ್ನು ತಲಿಪಿಸುವುದರ ಮೂಲಕ ಇಲಾಖೆಯು ಸದಾ ಶ್ರಮಿಸುತ್ತಿದೆ. ಇದರ ಸಂಪೂರ್ಣ ಸದುಪಯೋಗವನ್ನು ಪಡೆಯಲು ಮುಂದಾಗಬೇಕು ಎಂದು ಮುಂಡರಗಿ ತಾಲೂಕು ಸಿಡಿಪಿಓ ಎಮ್. ಎಮ್. ಇಸರನಾಳ ಹೇಳಿದರು.

ಡಂಬಳ ಗ್ರಾಮದ 13ನೇ ಅಂಗನವಾಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಗದಗ ಮತ್ತು ಶಿಶು ಅಭಿವೃದ್ಧಿ ಯೋಜನೆ ಮುಂಡರಗಿ, ಡಂಬಳ ಗ್ರಾಮದ ಅಂಗನವಾಡಿ ಕೇಂದ್ರಗಳ ಸಂಯುಕ್ತ ಆಶ್ರಯದಲ್ಲಿ ಪೋಷಣ್ ಮಾಸಾಚರಣೆ ಮತ್ತು ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಗರ್ಭಿಣಿ ಮಹಿಳೆಯರು ಪೌಷ್ಟಿಕ ಆಹಾರಕ್ಕೆ ಆದ್ಯತೆ ನೀಡಬೇಕು. ಮಕ್ಕಳ ದೈಹಿಕ ಕ್ಷಮತೆಗೆ ಹಾಗೂ ಕ್ರಿಯಾಶೀಲತೆಗೆ ಪೌಷ್ಟಿಕ ಆಹಾರಗಳು ಅಗತ್ಯವಿದ್ದು, ಮಕ್ಕಳು ಅಪೌಷ್ಟಿಕತೆಯಿಂದ ಬಳಲದಂತೆ ಪೌಷ್ಟಿಕ ಆಹಾರಗಳನ್ನು ನೀಡುವುದರೊಂದಿಗೆ ಅದರ ಮಹತ್ವವನ್ನು ಅರಿತುಕೊಳ್ಳುವುದು ಬಹಳ ಮುಖ್ಯ ಎಂದು ಹೇಳಿದರು.

13ನೇ ಅಂಗನವಾಡಿ ಕಾರ್ಯಕರ್ತೆ ಎನ್. ಎಫ್. ಆನಿ ಮಾತನಾಡಿ, ರೋಗ ಬಂದ ಮೇಲೆ ಚಿಕಿತ್ಸೆ ತೆಗೆದುಕೊಳ್ಳುವುದಕ್ಕಿಂತ ರೋಗ ಬರದೆ ಇರುವ ಹಾಗೆ ನೋಡಕೊಳ್ಳುವುದು ಬಹಳ ಮುಖ್ಯ. ಗರ್ಭಿಣಿ ಮಹಿಳೆಯರು ನಿಯಮಿತವಾಗಿ ಪೂರಕ ಆಹಾರ ಸೇವನೆ ಮಾಡಬೇಕು. ಆದಷ್ಟು ಪೌಷ್ಟಿಕ ಆಹಾರ ಸೇವನೆ ಮಾಡುವುದು ತಾಯಿ ಮತ್ತು ಮಗುವಿಗೆ ಒಳ್ಳೆಯದು ಎಂದು ತಿಳಿಸಿದರು.

ಪೋಷಣ ಅಭಿಯಾನದ ತಾಲೂಕು ಸಂಯೋಜಕ ಎಚ್.ಬಿ. ಟಗರನ್ನವರ ಮಾತನಾಡಿದರು. ಮಕ್ಕಳ ಹುಟ್ಟು ಹಬ್ಬ ಆಚರಣೆ, ಗರ್ಭಿಣಿ ಮಹಿಳೆಯರಿಗೆ ಸೀಮಂತ ಕಾರ್ಯಕ್ರಮದಲ್ಲಿ ವಿವಿಧ ಜಾನಪದ ಹಾಡುಗಳನ್ನು ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು ಹಾಡುವುದರ ಮೂಲಕ ಗರ್ಭಿಣಿ ಮಹಿಳೆಯರ ಮನೋಸ್ಥೈರ್ಯ ಹೆಚ್ಚಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿ ಮಮತಾಜ ಚಿಂತಗುಂಟಿ, ಎಸ್.ಎಸ್. ಬಾರಕೇರ, ರೇಷ್ಮಾ ಆಲೂರ, ಅಂಗನವಾಡಿ ಕಾರ್ಯಕರ್ತೆಯರಾದ ಎಲ್.ಎಮ್. ಚಿಕರಡ್ಡಿ, ಸೈನಾಜ ಕರನಾಚಿ, ಸೈನಾಜ ಮೂಲಿಮನಿ, ಎಸ್.ಎಚ್. ವಾಲ್ಮೀಕಿ, ಬಿ.ಎಚ್. ಕುದರಿಮೋತಿ, ಅಂಗನವಾಡಿ ಸಹಾಯಕಿಯರು, ಕಸ್ತೂರಿ ಪೂಜಾರ, ಚೇತನಾ ಡೋಣಿ, ನಾಗರತ್ನ ಹೊಂಬಳ, ಹನಮವ್ವ ಬೋರಗಿ, ರೇಷ್ಮಾ ನದಾಫ್, ರೂಪಾ ಗುಜ್ಜಲ್, ಅಕ್ಕಮ್ಮ ದಾಸರ, ಸಾರದಾ ಬಂಡಿ, ಆರ್.ವಾಯ್. ಕರಿಗಾರ, ಎಸ್.ವಾಯ್. ಹೊಂಬಳ, ಪಿ.ಕೆ. ಕಾಸ್ತಾರ, ಆರ್.ಎಮ್. ಸೊರಟೂರ, ಜಿ.ಆರ್. ಗೌಡರ, ಆರ್.ಜೆ. ತಾಂಬೋಟಿ, ಎಸ್.ಎನ್. ಬಳಗಾನೂರ, ಗರ್ಭಿಣಿ ಮಹಿಳೆಯರು, ಮಕ್ಕಳು, ಪೋಷಕರು ಇದ್ದರು.

> ಅಂಗನವಾಡಿ ಮೇಲ್ವಿಚಾರಕಿ ಎಸ್.ಎಸ್. ಹಾದಿಮನಿ ಮಾತನಾಡಿ, ದೇಹಕ್ಕೆ ಬೇಕಾಗುವ ಪೋಷಕಾಂಶಗಳ ಕುರಿತು ವಿವರಿಸುತ್ತ, ಅವುಗಳನ್ನು ಎಷ್ಟು ಪ್ರಮಾಣದಲ್ಲಿ ಬಳಸಿದರೆ ದೇಹಕ್ಕೆ ಶಕ್ತಿ ನೀಡಬಲ್ಲವು ಎಂಬುದನ್ನು ಧಾನ್ಯಗಳ ಚಿತ್ರ ಸಮೇತ ತೋರಿಸಿದ್ದು ಉತ್ತಮ ರಚನಾತ್ಮಕ ಕಾರ್ಯವಾಗಿದೆ. ಖನಿಜಾಂಶ ಹೊಂದಿರುವ ಸೊಪ್ಪು, ತರಕಾರಿ ಜೊತೆಗೆ ಮೊಳಕೆ ಒಡೆದ ಕಾಳುಗಳನ್ನು ಉಪಯೋಗಿಸಬೇಕು. ತಾಯಿ ಆರೋಗ್ಯವಾಗಿದ್ದರೆ ಮಾತ್ರ ಆರೋಗ್ಯವಂತ ಮಗುವಿಗೆ ಜನ್ಮ ನೀಡಲು ಸಾಧ್ಯ ಎಂದು ಹೇಳಿದರು.

# ಬಿಎಸ್ಸಿ ಪರೀಕ್ಷೆಯಲ್ಲಿ ಸಾಧನೆ





■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚಿಗೆ ನಡೆದ ಬಿಎಸ್ಸಿ ಪರೀಕ್ಷೆಯಲ್ಲಿ ಪಟ್ಟಣದ ಬಿಸಿಎನ್ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ದರ್ಶನ ಮುದಗಲ್ (ಶೇ.87) ಕಾಲೇಜಿಗೆ ಪ್ರಥಮ, ನಸ್ರೀನ್‌ಭಾನು ಉಪ್ಪಾರ (ಶೇ.84) ದ್ವಿತೀಯ ಮತ್ತು ಸಂಗೀತಾ ಚಿಣಗಿ (ಶೇ.84) ತೃತೀಯ ಸ್ಥಾನ ಪಡೆದಿದ್ದಾರೆ. ಇನ್ನುಳಿದಂತೆ ಭವ್ಯಶ್ರೀ ಸಿದ್ಧಪ್ಪನವ ಶೇ.83, ಸಂಕೀನಾ ಇಂಗಳಗಿ ಶೇ.82, ಸಹನಾ ಜಾಲಣ್ಣವರ ಶೇ.82, ಸುದೀಪ ದೇವಿಹೊಸೂರ ಶೇ.81, ಕವನಾ ಪಾಟೀಲ ಶೇ.81, ಅಕ್ಷಯ ಮೆಡ್ಲೇರಿ ಶೇ.80, ಮಾಬುಸಾಬ ಅತ್ತಿಗೇರಿ ಶೇ.80, ಪ್ರಶಾಂತ ಬೋರಟ್ಟಿ ಶೇ.77, ವಿಕಾಸ ಭಜಂತ್ರಿ ಶೇ.77, ಅಕ್ಷಯ ಭಜಂತ್ರಿ ಶೇ.77, ಅಭಿಷೇಕ ಹಿರೇಮಠ ಶೇ.73, ವಿಖ್ಯಾತ ದೈವಜ್ಞಾಚಾರ್ ಶೇ.73, ಮುತ್ತಣ್ಣ ಅರಳಿಕಟ್ಟಿ ಶೇ.67ರಷ್ಟು ಅಂಕ ಗಳಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಕಾಲೇಜಿನ ಸಂಸ್ಥಾಪಕ ಅಧ್ಯಕ್ಷ ಬಸವರಾಜ ನೆಲವಗಿ, ನಿರ್ದೇಶಕರಾದ ಲೋಹಿತ ನೆಲವಗಿ, ಪ್ರಾಚಾರ್ಯ ಮಂಜುನಾಥ ಬಂಡಿವಾಡ ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

## ಶಿವಾನುಭವ ಕಾರ್ಯಕ್ರಮದಲ್ಲಿ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

# ಹಾನಗಲ್ ಕುಮಾರ ಸ್ವಾಮಿಗಳ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಹಾನಗಲ್ ಪೂಜ್ಯ ಶ್ರೀ ಕುಮಾರಸ್ವಾಮಿಗಳು ನಾಡು ಕಂಡ ಅಪರೂಪದ ಶ್ರೇಷ್ಠ ಸ್ವಾಮಿಗಳು. ಯಾವಾಗಲೂ ಸಮಾಜವೆನ್ನುತ್ತಾ ಅದನ್ನೇ ಮಂತ್ರವಾಗಿಸಿಕೊಂಡವರು. ಸಮಾಜಕ್ಕೆ ಹಾನಗಲ್ ಕುಮಾರ ಸ್ವಾಮಿಗಳ ಕೊಡುಗೆ ಅಪಾರ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2712ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹಾನಗಲ್ ಕುಮಾರಸ್ವಾಮಿಗಳು ನಾಡಿನಾದ್ಯಂತ ಸಂಚರಿಸಿ ಶಿಕ್ಷಣದ ಬಗ್ಗೆ ಅರಿವು ಮೂಡಿಸುವ ಕಾಯಕ ಮಾಡಿದ್ದಾರೆ. ಎಲ್ಲೆಲ್ಲಿ ಮಠಗಳಿವೆಯೋ ಅಲ್ಲೆಲ್ಲ ಹಾಸ್ಟೆಲ್ ಪ್ರಾರಂಭಿಸಿ, ಸಮಾಜದ ಮಕ್ಕಳಿಗೆ ಶಿಕ್ಷಣ ಕೊಡಿಸಲು ಪ್ರಯತ್ನಿಸಿದ ಪ್ರತೀಕವಾಗಿ 1910ರಿಂದ ಕೆ.ಎಲ್.ಇ. ಸಂಸ್ಥೆ, ಇನ್ನು ಅನೇಕ ಸಂಸ್ಥೆಗಳನ್ನು ಕಟ್ಟಲು ಪ್ರೇರಕ ಶಕ್ತಿಯಾದರು.

ಮಠಗಳ ಉತ್ತರಾಧಿಕಾರಿಗಳಾದ ಸ್ವಾಮಿಗಳಿಗೆ ತರಬೇತಿ ಅವಶ್ಯವೆಂದು ಅರಿತು, ಶಿವಯೋಗ ಮಂದಿರವನ್ನು ಕಟ್ಟಿ ಸಮಾಜದ ಸ್ವಾಮಿಗಳಿಗೆ ಸಂಜೀವಿನಿಯಾದರು. ಇಂದು ನಾಡಿನಾದ್ಯಂತ ಹಲವಾರು ಸ್ವಾಮಿಗಳು ಶಿವಯೋಗಮಂದಿರದಲ್ಲಿ ತಮ್ಮನ್ನು ರೂಪಿಸಿಕೊಂಡು, ಮಠಮಾನ್ಯಗಳ ಮೂಲಕ ಸಮಾಜಸೇವೆಯಲ್ಲಿ ನಿರತರಾಗಿದ್ದಾರೆ. ಬೇರೆ ಬೇರೆ ರಾಜ್ಯಗಳಲ್ಲಿಯೂ ಯೋಗ, ಸಮಾಜ ಸೇವೆ, ಶಿಕ್ಷಣ, ಸಾಹಿತ್ಯ ಹಾಗೂ ಅಧ್ಯಾತ್ಮ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡುತ್ತಾ, ಶಿವಯೋಗ ಮಂದಿರದ ಹಿರಿಮೆಯನ್ನು ಹೆಚ್ಚಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.



ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಗದಗ ಡಿಜಿಎಂ ಆಯುರ್ವೇದ ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ. ಉಮೇಶ ಪುರದ ಹಾಗೂ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಶ್ರೀ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ಶ್ರೀ ಮೃತ್ಯುಂಜಯ ಪ್ರೌಢಶಾಲೆ ಇಂಗಳಹಳ್ಳಿ ತಾಲೂಕು ಹುಬ್ಬಳ್ಳಿ ಮುಖ್ಯೋಪಾಧ್ಯಾಯ ಕಳಕಮಲ್ಲೇಶ ಸಿ.ಪಟ್ಟಣಶೆಟ್ಟಿ ಇವರನ್ನು ಸನ್ಮಾನಿಸಲಾಯಿತು.

ಡಾ. ಪದ್ಮಾ ಜಿ ಕಬಾಡಿ ಸ್ವರಚಿತ ಕವಿತೆಗಳನ್ನು ಸುಶ್ರಾವ್ಯವಾಗಿ ಹಾಡಿದರು. ವಚನಸಂಗೀತ ಸೇವೆಯನ್ನು ಮಂಜುಳಾ ಇದ್ಲಿ, ಗುರುನಾಥ್ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಪೂರ್ವಿಕಾ ಕೆ.ಹಿರೇಮಠ, ವಚನ ಚಿಂತನವನ್ನು ಭುವನ ಸಂತೋಷ ವಸ್ತ್ರದ ಇವರು ಮಾಡಿದರು. ದಾಸೋಹ ಸೇವೆಯನ್ನು ಶ್ರೀ ಜಗದ್ಗುರು ತೋಂಟದಾರ್ಯ ಶಿಕ್ಷಣ ಸಂಸ್ಥೆಗಳ ನೌಕರರ ಸಹಕಾರಿ ಪತ್ತಿನ ಸಂಘದ ಅಧ್ಯಕ್ಷರಾದ ಎಸ್.ಎಸ್. ಪಟ್ಟಣಶೆಟ್ಟಿ ಹಾಗೂ ಕಾರ್ಯದರ್ಶಿ ದೊಡ್ಡಬಸಪ್ಪ ಚಿತ್ರಗಾರ ನೆರವೇರಿಸಿದರು. ಪ್ರೊ. ಶಿವಾನಂದ ಹೊಂಬಳ ಸ್ವಾಗತಿಸಿದರು. ವಿದ್ಯಾವತಿ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಉಮೇಶ ಪುರದ, ವಿದ್ಯಾವತಿ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್‌ರಾದ ಐ.ಬಿ. ಬೆನಕೊಪ್ಪ, ಶಿವಾನುಭವ ಸಮಿತಿ ಸಹಚೇರಮನ್‌ರಾದ ಶಿವಾನಂದ ಹೊಂಬಳ ಉಪಸ್ಥಿತರಿದ್ದರು.


> ಉಪನ್ಯಾಸಕರಾಗಿ ಆಗಮಿಸಿದ ಬೆಳಗಾವಿ ಕಾರಂಜಿಮಠದ ಶಿವಯೋಗಿ ದೇವರು ಮಾತನಾಡಿ, ಮಠಗಳು ಸಮಾಜದುದ್ಧಾರದ ಮಹಾನ್ ಕೇಂದ್ರಗಳಾಗಬೇಕು. ಸ್ವಾಮಿಗಳು ಸೇತುವೆಯೋಪಾದಿಯಲ್ಲಿ ನಿಂತು ಸಮಾಜವನ್ನು ಒಂದುಗೂಡಿಸುವ ಕೆಲಸ ಮಾಡಬೇಕು. ಹಾನಗಲ್ ಕುಮಾರಸ್ವಾಮಿಗಳ ಬಾಲ್ಯಜೀವನ ಅಧ್ಯಯನ, ಧಾರ್ಮಿಕ ಅಧ್ಯಯನ ಹಾಗೂ ಶಿಕ್ಷಕರಾದ ಕುಮಾರಸ್ವಾಮಿಗಳು ಹೇಗೆ ಸಮಾಜದಿಂದ ಸ್ವಾಮಿಗಳಾದರು ಮತ್ತು ಸನ್ಯಾಸಿ ಮತ್ತು ಸ್ವಾಮಿಗಳೆಂದು ಯಾರಿಗೆ ಹೇಳುತ್ತೇವೆ ಎಂಬ ಬಗ್ಗೆ ಅರ್ಥಪೂರ್ಣವಾಗಿ ತಿಳಿಸಿದರು.

# ಸಂಘವನ್ನು ಲಾಭದತ್ತ ತರಲು ಪ್ರಯತ್ನ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ ಹಲವು ವರ್ಷದಿಂದ ನಷ್ಟದಲ್ಲಿಯೇ ಸಾಗುತ್ತಿರುವ ಸಂಘವನ್ನು ಲಾಭದತ್ತ ತರಲು ಪ್ರಯತ್ನಿಸಲಾಗುತ್ತಿದ್ದು, ಸಂಘದ ನಿರ್ದೇಶಕ ಮಂಡಳಿ ಮತ್ತು ಸದಸ್ಯರು ಸಹಕಾರ ನೀಡಬೇಕು ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ ನಂ3ರ ಅಧ್ಯಕ್ಷ ಕಳಕಪ್ಪ ಟೆಂಗಿನಕಾಯಿ ವಿನಂತಿಸಿಕೊಂಡರು.

ಸಂಘದ 85ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬರುವ ವರ್ಷದಲ್ಲಿ ನಷ್ಟವನ್ನು ಮೀರಿ ಲಾಭದತ್ತ ತರುವ ಪ್ರಯತ್ನ ಮಾಡಲಾಗುವುದು. ಈ ದಿಸೆಯಲ್ಲಿ ಬೆಳೆಸಾಲ ಪಡೆದ ರೈತರು ಮತ್ತು ವ್ಯಾಪಾರ ಸಾಲಗಾರರು ಹಲವು ವರ್ಷಗಳಿಂದ ಕಟ್‌ಬಾಕಿದಾರರಾಗಿದ್ದಾರೆ. ಈಗಾಗಲೇ ಅವರಿಗೆ ನೋಟಿಸ್ ನೀಡಲಾಗಿದ್ದು, ಸಂಘದ ಅಭಿವೃದ್ಧಿ ದೃಷ್ಟಿಯಿಂದ ಕಟ್‌ಬಾಕಿದಾರ ಸಾಲಗಾರರ ಮನವೊಲಿಸಿ ವಸೂಲಿ ಮಾಡುವ ಪ್ರಕ್ರಿಯೆ ನಡೆದಿದೆ. ಇದಕ್ಕೆ ಸಂಘದ ಸರ್ವ ಸದಸ್ಯರ ಸಹಕಾರ ಪ್ರಾಮುಖ್ಯವಾಗಿದೆ ಎಂದರು.




ಕೆ.ಸಿ.ಸಿ ಬ್ಯಾಂಕಿಗೆ ನೀಡಿರುವ ಕಟ್ಟಡದ ಬಾಡಿಗೆ ಮೊತ್ತವನ್ನು ಹೆಚ್ಚಿಸುವುದು, ಸರಕಾರದ ಬೆಂಬಲ ಬೆಲೆಯ ಕೃಷಿ ಉತ್ಪನ್ನಗಳ ಖರೀದಿ ಕೇಂದ್ರ ಮತ್ತು ರಿಯಾಯಿತಿ ದರದ ಬೀಜ, ಗೊಬ್ಬರ, ಕ್ರಿಮಿನಾಶಕ ಮಾರಾಟ ಕೇಂದ್ರವನ್ನು ತೆರೆದು ಲಾಭದತ್ತ ಸಂಘವನ್ನು ಕೊಂಡ್ಯೊಯುವ ಪ್ರಯತ್ನ ಮಾಡಲಾಗುವುದು ಎಂದರು.

ಸಂಘದ ಉಪಾಧ್ಯಕ್ಷ ಅಂಕಲೆಪ್ಪ ಬಾಳಿಕಟ್ಟಿ, ನಿರ್ದೇಶಕರಾದ ರಾಚಪ್ಪ ನಾಲ್ವಾಡದ, ಮಲ್ಲಪ್ಪ ಸೊರಟೂರು, ಅಪ್ಪಣ್ಣ ನ್ಯಾವಳ್ಳಿ, ಚಂದ್ರಶೇಖರಪ್ಪ ಮೂಡಲತೋಟ, ಪಾಲಾಕ್ಷಪ್ಪ ಅರಹುಣಶಿ, ಬಸವರಾಜ ಬಾರಿಕಾಯಿ, ಬಸವ್ವ ಬೆಟಗೇರಿ, ಯಲ್ಲಪ್ಪ ಪೂಜಾರ, ಬಸವರಾಜ ಹುಬ್ಬಳ್ಳಿ ಉಪಸ್ಥಿತರಿದ್ದರು. ಷಣ್ಮುಖಪ್ಪ ಮದ್ನೂರು ಸ್ವಾಗತಿಸಿದರು, ಪ್ರವೀಣ ಕಲಾಲ ವಂದಿಸಿದರು.

# ಎಸ್‌ಡಿಪಿಐ ಕ್ಷೇತ್ರ ಪ್ರತಿನಿಧಿಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಗದಗ ಘಟಕದ ಆಶ್ರಯದಲ್ಲಿ ನರಗುಂದ ವಿಧಾನಸಭಾ ಕ್ಷೇತ್ರ ಪ್ರತಿನಿಧಿಗಳನ್ನು ಚುನಾಯಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಎಸ್‌ಡಿಪಿಐ ಗದಗ ಜಿಲ್ಲಾ ಉಸ್ತುವಾರಿ ರಮಜಾನ ಕಡಿವಾಲ ವಹಿಸಿದ್ದರು. ಒಟ್ಟು 20 ನಾಮ ನಿರ್ದೇಶಿತ ಪ್ರತಿನಿಧಿಗಳಲ್ಲಿ 9 ಜನರನ್ನು ಪದಾಧಿಕಾರಿಗಳಾಗಿ ಆಯ್ಕೆ ಮಾಡಲಾಯಿತು. ಗದಗ ಜಿಲ್ಲಾ ಎಸ್‌ಡಿಪಿಐ ಕಾರ್ಯದರ್ಶಿ ಖ್ವಾಜಾಮೈನುದ್ದಿನ ಚುನಾವಣಾ ಅಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.




ನರಗುಂದ ವಿಧಾನಸಭಾ ಕ್ಷೇತ್ರದ ಎಸ್‌ಡಿಪಿಐ ಅಧ್ಯಕ್ಷರಾಗಿ ದಾವಲಸಾಬ ರಾಜೇಖಾನ, ಉಪಾಧ್ಯಕ್ಷರಾಗಿ ಖಲಂದರ ಸಕಲಿ, ಪ್ರಧಾನ ಕಾರ್ಯದಶಿಯಾಗಿ ಇಮ್ರಾನ ಅತ್ತಾರ, ಖಜಾಂಚಿಯಾಗಿ ಜಮಾಲಸಾಬ ಮುಲ್ಲಾ, ಸಹ ಕಾರ್ಯದಶಿಯಾಗಿ ಜವಾದ ಮುಲ್ಲಾ, ಸದಸ್ಯರಾಗಿ ಮೆಹಬೂಬ ಮಕಾಂದಾರ, ಅಶರಫ ನವಲಗುಂದ, ಇಮ್ರಾನ ಮುನವಳ್ಳಿ, ಸಿಕಂದರ ಇವರನ್ನು ಚುಣಾಯಿತ ಪ್ರಧಿನಿದಿಗಳಾಗಿ ಘೋಷಿಸಲಾಯಿತು.

## ವಿಶ್ವ ರೇಬಿಸ್ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ವೆಂಕಟೇಶ ರಾಠೋಡ್ ಕರೆ

# ರೇಬಿಸ್ ಲಸಿಕೆಯ ಬಗ್ಗೆ ಭಯ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ರೇಬಿಸ್ ದಿನದ ಅಂಗವಾಗಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ ಹಾಗೂ ಜಿಮ್ಸ್ ಸರಕಾರಿ ನರ್ಸಿಂಗ್ ಕಾಲೇಜ್ ಗದಗ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ರೇಬಿಸ್ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರೇಬಿಸ್ ಒಂದು ವೈರಾಣುವಿನಿಂದ ಹರಡುವ ಮಾರಕ ಖಾಯಿಲೆಯಾದ್ದು, ಇದರ ತಡೆಗಟ್ಟುವಿಕೆಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಈ ರೋಗವನ್ನು ಸೋಲಿಸುವಲ್ಲಿ ಪ್ರಗತಿಯನ್ನು ಸಾಧಿಸಲು ಈ ದಿನವನ್ನು ವಾರ್ಷಿಕವಾಗಿ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ್ ಮಾತನಾಡಿ, ರೇಬಿಸ್ ಲಸಿಕೆಯನ್ನು ಅಭಿವೃದ್ಧಿಪಡಿಸಿದ ಸೂಕ್ಷ್ಮ ಜೀವಶಾಸ್ತ್ರಜ್ಞ ಲೂಯಿಸ್ ಪಾಶ್ಚರ್ಸ್ ಅವರ ಮರಣದ ವಾರ್ಷಿಕೋತ್ಸವವನ್ನು ವಿಶ್ವ ರೇಬಿಸ್ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರತಿ ವರ್ಷದಂತೆ ಈ ವರ್ಷದಲ್ಲಿ 'ರೇಬಿಸ್ ಗಡಿಗಳನ್ನು ಮೀರಿ ಮುಂದುವರೆಯೋಣ' ಎಂಬ ಘೋಷವಾಕ್ಯದೊಂದಿಗೆ ವಿಶ್ವ ರೇಬಿಸ್ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಇದೊಂದು 100% ಮಾರಕ ರೋಗವಾಗಿದ್ದು, ಇದನ್ನು ಸಂಪೂರ್ಣವಾಗಿ ತಡೆಗಟ್ಟಬಹುದಾಗಿದೆ. ವರ್ಷಕ್ಕೆ 20 ಸಾವಿರ ಸಾವುಗಳು ಭಾರತದಲ್ಲಿ ರೇಬಿಸ್‌ನಿಂದ ಆಗುತ್ತಿವೆ. ರೇಬಿಸ್ ಲಸಿಕೆಯ ಬಗ್ಗೆ ಭಯ ಬಿಟ್ಟು ಎಲ್ಲರೂ ಲಸಿಕೆಯನ್ನು ಹಾಕಿಸಿಕೊಳ್ಳಬಹುದು ಎಂದರು.



ಜಿಮ್ಸ್ ಸರಕಾರಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರು ಹಾಗೂ ಶಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಜ್ಯೋತಿ ಕರಿಗೌಡರ ಮಾತನಾಡಿ, ಹಾಲುಣಿಸುವ ತಾಯಂದಿರು 1 ವರ್ಷದೊಳಗಿನ ಮಕ್ಕಳು ಮತ್ತು ವಯಸ್ಕರು ಸಹ ಪ್ರಾಣಿಗಳು ಕಡಿದಾಗ ರೇಬಿಸ್ ವಿರುದ್ಧ ಲಸಿಕೆಯನ್ನು ತಪ್ಪದೇ ತೆಗೆದುಕೊಳ್ಳುವ ಮೂಲಕ ಪ್ರತಿಯೊಬ್ಬರೂ ಮುಂಜಾಗ್ರತೆ ವಹಿಸಬೇಕು. ಸಾಕು ಪ್ರಾಣಿಗಳಿಗೂ ಕೂಡ ತಪ್ಪದೇ ಪ್ರತಿ ವರ್ಷ ಲಸಿಕೆ ಹಾಕಿಸಿ ಎಂದು ತಿಳಿಸಿದರು.

ನಾಯಿ, ಬೆಕ್ಕು ಇತರೇ ಪ್ರಾಣಿಗಳು ಕಚ್ಚಿದಾಗ ನಿರ್ಲಕ್ಷ್ಯವಹಿಸದೇ ತಕ್ಷಣವೇ ಗಾಯವನ್ನು ಸೋಪು ಹಾಕಿ 15 ನಿಮಿಷಗಳವರೆಗೆ ಚೆನ್ನಾಗಿ ತೊಳೆದು ನಂತರ ನಂಜು ನಿರೋಧಕ ದ್ರಾವಣ ಲೇಪಿಸಿ ಹತ್ತಿರದ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕು. ಸಾಮಾನ್ಯವಾಗಿ ರೇಬಿಸ್ ಸೋಂಕು ಹೊಂದಿದ ಪ್ರಾಣಿಗಳಲ್ಲಿ ನಾಯಿಗಳಿಂದ ಶೇ.97ರಷ್ಟು, ಬೆಕ್ಕುಗಳಿಂದ ಶೇ.2 ಹಾಗೂ ಇತರೇ ಪ್ರಾಣಿಗಳಿಂದ ಶೇ. 1ರಷ್ಟು ರೋಗ ಹರಡುವ ಸಾಧ್ಯತೆಯಿದೆ. ಇವುಗಳ ಕಡಿತದಿಂದ, ಪರಚುವಿಕೆಯಿಂದ, ತೆರೆದ ಚರ್ಮದ ಮೇಲೆ ನೆಕ್ಕುವಿಕೆಯಿಂದ, ಜೊಲ್ಲಿನ ಸಂಪರ್ಕದಿಂದ ರೋಗ ಹರಡುವ ಸಾಧ್ಯತೆ ಇದ್ದು, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆಗಳು ಲಭ್ಯವಿರುವಂತೆ ಕ್ರಮ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ. ಸಂಗಮೇಶ ಅಸೂಟಿ, ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ. ಶ್ರೀನಿವಾಸ ಆರೇರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ್, ಜಿಮ್ಸ್ ನರ್ಸಿಂಗ್ ಕಾಲೇಜಿನ ನರ್ಸಿಂಗ್ ವಿದ್ಯಾರ್ಥಿಗಳು, ಉಪನ್ಯಾಸಕರು/ಸಿಬ್ಬಂದಿ ವರ್ಗದವರು ಹಾಗೂ ಜಿಲ್ಲಾ ಸಮೀಕ್ಷಣಾ ಘಟಕದ ಅಧಿಕಾರಿಗಳು/ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಜಿಲ್ಲಾ ಸಮೀಕ್ಷಣಾ ಘಟಕದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್. ರಬ್ಬನಗೌಡ್ರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ನಾಳೆ ಗಾಂಧೀಜಿ ಜನ್ಮ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಅಕ್ಟೋಬರ್ 2 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ ಆಗಮಿಸುವರು.

ಗಾಂಧೀಜಿಯವರ ಪ್ರಿಯ ಭಜನೆಯನ್ನು ಸಂಗೀತ ಕಲಾವಿದರು ನಡೆಸಿಕೊಡುವರು ಹಾಗೂ ವಿದ್ಯಾರ್ಥಿಗಳಿಗೆ ಮಹಾತ್ಮಾ ಗಾಂಧೀಜಿ ಕುರಿತು ಏರ್ಪಡಿಸಲಾದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಗುವುದು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬ.ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಸ್ವಾಗತ ಕೋರಿದ್ದಾರೆ.

# ಕೃಷಿ ಹೊಂಡಗಳು ಭರ್ತಿ



■ವಿಜಯಸಾಕ್ಷಿ ಸುದ್ದಿ, ರೋಣ

ಹಿಂಗಾರು ಹಂಗಾಮಿನ ಬೆಳೆಗಳ ಬಿತ್ತನೆಗೆ ವರ್ಷಧಾರೆ ಸುರಿಸಿದ ವರುಣ ಹಲವಾರು ಅವಾಂತರಗಳನ್ನು ಸೃಷ್ಟಿಸಿದರೂ ಸಹ ರೈತರ ಮುಖದಲ್ಲಿ ಮಂದಹಾಸ ಮೂಡಿಸಿದ್ದಾನೆ.

ಕಳೆದ ಕೆಲ ದಿನಗಳಿಂದ ಮರೆಯಾಗಿದ್ದ ಮಳೆ ರವಿವಾರ ಸಂಜೆ ರಭಸದಿಂದ ಸುರಿಯುವ ಮೂಲಕ ಜಮೀನುಗಳಲ್ಲಿನ ಕೃಷಿ ಹೊಂಡಗಳನ್ನು ಭರ್ತಿಗೊಳಿಸಿತು. ಮುಂಗಾರು ಮಳೆಗೂ ತುಂಬಿ ಹರಿಯದ ಹಳ್ಳ-ಕೊಳ್ಳಗಳು ಒಂದೇ ಮಳೆಗೆ ಭರ್ತಿಯಾಗಿ ಹರಿಯತೊಡಗಿವೆ.

ರವಿವಾರ ಸಂಜೆ 6 ಗಂಟೆ ಸುಮಾರಿಗೆ ಆರಂಭಗೊಂಡ ಭಾರೀ ಮಳೆ ರಾತ್ರಿ 9 ಗಂಟೆಯವರೆಗೂ ಸುರಿಯಿತು. ಇದರಿಂದ ರೋಣ ಪಟ್ಟಣ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಅನೇಕ ಸಮಸ್ಯೆಗಳು ಸೃಷ್ಟಿಯಾದವು.

ರೋಣ, ಜಕ್ಕಲಿ, ಮಾರನಬಸರಿ ಗ್ರಾಮಗಳಲ್ಲಿ ಭಾರೀ ಮಳೆ ಸುರಿದಿದ್ದರಿಂದ ಹಲವು ಅವಾಂತರಗಳೂ ಸೃಷ್ಟಿಯಾದವು. ಮುಖ್ಯವಾಗಿ ತಾಲೂಕಿನ ಯಾವಗಲ್ಲ ಗ್ರಾಮದ ಬೆಣ್ಣೆಹಳ್ಳ ಭರ್ತಿಯಾಗಿದ್ದರಿಂದ ಜಮೀನುಗಳಿಗೆ ನೀರು ನುಗ್ಗಿ ರೈತರು ಹಾನಿ ಅನುಭವಿಸುವ ಸ್ಥಿತಿ ನಿರ್ಮಾಣವಾಗಿದೆ. ಅಲ್ಲದೆ ಸೇತುವೆ ಮೇಲೆ ನೀರು ನುಗ್ಗಿದ್ದು, ರಸ್ತೆ ಸಂಚಾರ ಕೂಡ ಕೆಲ ಗಂಟೆಗಳವರೆಗೆ ಸ್ಥಗಿತಗೊಂಡಿತ್ತು.

## ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಡಾ. ಕೆ.ಬಿ. ಧನ್ನೂರ

# ಹೃದಯದ ಕಡೆಗೆ ಗಮನವಿರಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

60 ವರ್ಷ ದಾಟಿದ ಹಿರಿಯ ನಾಗರಿಕರು ತಮ್ಮ ಜೀವನ ಶೈಲಿಯ ಕಡೆಗೆ ಗಮನ ನೀಡಬೇಕು. ಅದರಲ್ಲಿಯೂ ಹ್ಲದಯದ ಕಡೆಗೆ ಹೆಚ್ಚಿನ ಗಮನ ನೀಡಬೇಕು. ಒಮ್ಮೆ ಹೃದಯದ ಬೇನೆ ಶುರುವಾಯಿತೆಂದರೆ ಅದನ್ನು ವಾಸಿ ಮಾಡಲು ಸಾಕಷ್ಟು ಶ್ರಮ ವಹಿಸಬೇಕಾಗುತ್ತದೆ. ಆದ್ದರಿಂದ ನಿಮ್ಮ ಹೃದಯದ ಕಡೆಗೆ ಹೆಚ್ಚಿನ ಗಮನ ನೀಡಬೇಕಾದುದು ಅವಶ್ಯಕ ಎಂದು ಡಾ. ಕೆ.ಬಿ. ಧನ್ನೂರ ಹೇಳಿದರು.

ಪಟ್ಟಣದ ಹಿರೇಮಠ ಸಭಾ ಭವನದಲ್ಲಿ ರವಿವಾರ ಸಂಜೆ ಜರುಗಿದ ನಿವೃತ್ತ ನೌಕರರ ಮತ್ತು ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಅವರು ಹೃದಯ ಮತ್ತು ಹೃದಯ ಬೇನೆ ಕುರಿತು ವಿಶೇಷ ಉಪನ್ಯಾಸ ನೀಡಿದರು.

ದೇಹಕ್ಕೆ ರಕ್ತವನ್ನು ವಿತರಿಸುವ ಪ್ರಮುಖ ಅಂಗವೇ ಹೃದಯವಾಗಿದೆ. ಹೃದಯದ ಕವಾಟಗಳು ಎಂದಿಗೂ ಬಂದ್ ಆಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ದೇಹಕ್ಕೆ ಅನುಕೂಲವಲ್ಲದ ಆಹಾರವನ್ನು ಸೇವಿಸಿದಾಗ, ಧೂಮಪಾನ ಮಾಡುವುದರಿಂದ, ತಂಬಾಕು ಸೇವನೆಯಿಂದ, ಗುಟಕಾ ಮತ್ತಿತರ ಅಪಾಯಕಾರಿ ವಸ್ತುಗಳ ಸೇವನೆಯಿಂದ ಹೃದಯದ ಬೇನೆಗಳು ಪ್ರಾರಂಭವಾಗುತ್ತವೆ. ಆದ್ದರಿಂದ ಹಿರಿಯರಾಗಲಿ, ಕಿರಿಯರಾಗಲಿ ಇಂತಹ ವಸ್ತುಗಳಿಂದ ದೂರವಿದ್ದು ಆರೋಗ್ಯವನ್ನು ಕಾಪಾಡಿಕೊಳ್ಳುವತ್ತ ಗಮನ ಹರಿಸಬೇಕೆಂದು ಡಾ. ಧನ್ನೂರ ಹೇಳಿದರು.



ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ನಮ್ಮ ಆರೋಗ್ಯದ ಬಗ್ಗೆ ನಮಗೆ ಕಾಳಜಿ ಇರಬೇಕು. ಈ ವಯಸ್ಸಿನಲ್ಲಿ ಇಲ್ಲದ ಮಾನಸಿಕ ಒತ್ತಡವನ್ನು ಹೊಂದಿದರೆ ಆರೋಗ್ಯ ಕೆಡುತ್ತದೆ. ಹೀಗೆ ವೈದ್ಯರು ನಮ್ಮ ಸಭೆಗಳಲ್ಲಿ ಪಾಲ್ಗೊಂಡು ನಮಗೆ ಆರೋಗ್ಯದ ಬಗ್ಗೆ ಮಾರ್ಗದರ್ಶನ ಮಾಡಿದರೆ ನಮ್ಮ ಅನೇಕ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬಹುದು ಎಂದರು.

ಇಂದಿನ ಜೀವನ ಶೈಲಿ ಸಾಕಷ್ಟು ಬದಲಾವಣೆ ಹೊಂದಿರುವುದರಿಂದ ಅನೇಕ ರೋಗಗಳು ನಮಗೆ ಬರುತ್ತಿವೆ. ಅದಕ್ಕಾಗಿ ನಿತ್ಯವೂ ನಡಿಗೆ, ಅಲ್ಪ ವ್ಯಾಯಾಮ ಇವುಗಳನ್ನು ಮಾಡುವದರೊಂದಿಗೆ ಮನೆಯಲ್ಲಿ ಚಿಕ್ಕ ಪುಟ್ಟ ಕೆಲಸಗಳನ್ನು ಮಾಡುವ ಮೂಲಕ ಸದಾ ಚಟುವಟಿಕೆಯ ಜೀವನ ಸಾಗಿಸಲು ಪ್ರಯತ್ನಿಸಿದರೆ ರೋಗಾದಿಗಳಿಂದ ದೂರವಿದ್ದು ದೀರ್ಘ ಕಾಲದ ಜೀವನವನ್ನು ಪಡೆಯಬಹುದು ಎಂದರು.

ಕಾರ್ಯದರ್ಶಿ ವೀರಭದ್ರಪ್ಪ ಕೆರಿಯವರ ಪ್ರಾರ್ಥಿಸಿದರು. ಸಭೆಯಲ್ಲಿ ಶಿವಪುತ್ರಪ್ಪ ಸಂಗನಾಳ, ಸಿ.ಎಂ. ಕುಲಕರ್ಣಿ, ಬಿ.ಜಿ. ಹಳ್ಳೂರ, ಎಸ್.ಪಿ. ಧರ್ಮಾಯತ, ಕೆ.ಕೆ. ದಾಸರ, ಜಿ.ಎ. ಬೆಲ್ಲದ, ಎಚ್.ಕೆ. ಜೋಗಿ, ಎಸ್.ಬಿ. ಹೊಸಮನಿ, ವಿ.ಎಸ್. ಕೊಟಗಿ, ಬಿ.ಎ. ಕಲಾಲಬಂಡಿ, ಕೆ.ಎಂ. ಸಂಗನಾಳ, ವಿ.ಎ. ಕುಂಬಾರ, ಎಂ.ಎಸ್. ದಢೇಸೂರಮಠ ಮುಂತಾದವರು ಪಾಲ್ಗೊಂಡಿದ್ದರು. ಶಿವಯೋಗಿ ಜಕ್ಕಲಿ ಸ್ವಾಗತಿಸಿ, ವಂದಿಸಿದರು.


# ರಸ್ತೆ ದುರಸ್ತಿಗೆ ಆಗ್ರಹಿಸಿ ಇಂದು ಕವಲೂರು ಬಂದ್

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕವಲೂರು ಗ್ರಾಮದ ಶ್ರೀ ಕಲ್ಪವೃಕ್ಷ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಒಕ್ಕೂಟದಿಂದ ರಸ್ತೆಗಳ ನಿರ್ಮಾಣ,ದುರಸ್ತಿಗೆ ಆಗ್ರಹಿಸಿ ಅ.01 ರಂದು ಕವಲೂರು ಗ್ರಾಮ ಬಂದ್ ಮಾಡಿ ಪ್ರತಿಭಟನೆಗೆ ನಿರ್ಧರಿಸಲಾಗಿದೆ ಮಹಿಳಾ ಒಕ್ಕೂಟದ ಅಧ್ಯಕ್ಷೆ ಗಂಗಮ್ಮ ಸಿಂಧೋಗಿ ಹೇಳಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ, ರಸ್ತೆಗಳ ನಿರ್ಮಾಣ, ದುರಸ್ತಿಗೆ ಆಗ್ರಹಿಸಿ ಕವಲೂರು ಬಂದ್ ಮಾಡಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಗ್ರಾಮದ ಪಂಚಲಿಂಗೇಶ್ವರ ದೇವಸ್ಥಾನದಿಂದ ಪ್ರಮುಖ ಬೀದಿಯಲ್ಲಿ ಸಂಚರಿಸಿ ಹೊಸ ಬಸ್ ನಿಲ್ದಾಣದಲ್ಲಿ ಧರಣಿ ಮಾಡಲಾಗುವದು, ಈ ಪ್ರತಿಭಟನೆಯಲ್ಲಿ ಮಹಿಳಾ ಒಕ್ಕೂಟದ ಸುಮಾರು 1500 ಸದಸ್ಯರು ಮತ್ತು ಗ್ರಾಮದ ಮಹಿಳೆಯರು, ವಿದ್ಯಾರ್ಥಿಗಳು, ಯವಕರು ಮತ್ತು ಗ್ರಾಮದ ರೈತರು, ಮುಖಂಡರು ಭಾಗವಹಿಸಲಿದ್ದಾರೆ, 15 ವರ್ಷದಿಂದ ಅಸುರಕ್ಷಿತ ರಸ್ತೆಯಲ್ಲಿ ಸಂಚರಿಸುತ್ತ ಸಾವು ನೋವು ಅನುಭವಿಸುತ್ತಾ ಪ್ರತಿ ನಿತ್ಯ ಬದುಕುತ್ತಿದ್ದೇವೆ. ತಗ್ಗು ಗುಂಡೆಯಿಂದ ಕೂಡಿದ ರಸ್ತೆಯಲ್ಲಿ ತುರ್ತು ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರು, ವಯಸ್ಕರು, ಚಿಕ್ಕ ಮಕ್ಕಳು ಸರಿಯಾದ ಸಮಯಕ್ಕೆ ಪಕ್ಕದ ಪಟ್ಟಣಕ್ಕೆ ತಲುಪದೆ ಸಾವುಗಳಾಗಿರುವದು ಇದೆ. ರಸ್ತೆ ಅಪಘಾತಗಳು ಸಂಭವಿಸಿ ತೀರ್ವತರ ಗಾಯಗಳು ಆಗಿದ್ದು ಇದೆ. ಕವಲೂರು ಗ್ರಾಮದಿಂದ ಮುಂಡರಗಿ, ಅಳವಂಡಿ, ಬನ್ನಿಕೊಪ್ಪ, ಹಂದ್ರಾಳ ಮತ್ತು ಗುಡಿಗೇರಿ ಗ್ರಾಮಗಳನ್ನು ಸಂಪರ್ಕಿಸುವ ರಸ್ತೆಗಳನ್ನು ಸುಧಾರಿಸುವಂತೆ ಮನವಿ ಮಾಡಲಾಯಿತು. ಲಿಖಿತ ಉತ್ತರೋಂದಿಗೆ ನಮ್ಮಲ್ಲಿಗೆ ಬಂದ ಅಧಿಕಾರಿಗಳು ವಾರ್ಷಿಕ ನಿರ್ವಹಣೆ ಕಾಮಗಾರಿ ಆರಂಭಿಸಿ ತಗ್ಗು ಗುಂಡಿಯನ್ನು ಮುಚ್ಚಲಾಗುವದು, ಶಾಸಕರೊಂದಿಗೆ ಚರ್ಚಿಸ ಲಾಗುವದು ಮತ್ತು ಸರಕಾರವು ರಸ್ತೆ ಅಭಿವೃದ್ಧಿಗೆ ಅನುದಾನ ಒದಗಿಸಿದಲ್ಲಿ ರಸ್ತೆ ಅಭಿವೃದ್ಧಿ ಪಡಿಸಲಾಗುವದು ಎಂಬ ಹಾರಿಕೆ ಉತ್ತರವನ್ನ ನೀಡಿದ್ದಾರೆ.




ಪಕ್ಕದ ಯಲಬುರ್ಗಾ ಕ್ಷೇತ್ರದಲ್ಲಿ ಎಲ್ಲಾ ರಸ್ತೆಗಳ ಅಭಿವೃದ್ಧಿಗೆ ಅನುದಾನ ಲಭ್ಯತೆಯಿರುವಾಗ ಕೊಪ್ಪಳ ಕ್ಷೇತ್ರದಲ್ಲಿ ರಸ್ತೆಗಳ ಅಭಿವೃದ್ಧಿಗೆ ಅನುದಾನ ಲಭ್ಯತೆಯಿಲ್ಲ ಅಂದರೆ ಹೇಗೆ ಎಂಬ ಅನುಮಾನ ಮೂಡುತ್ತಿದೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಲ್ಲಿ ಪ್ರತಿ ವರ್ಷ ಸಾವಿರಾರು ಕೋಟಿ ಅನುದಾನ ಬಳಕೆಯಾಗದೆ ಉಳಿಯುತ್ತಿದೆ ಈ ಅನುದಾನವನ್ನ ಬಳಸಿಕೊಳ್ಳುವಲ್ಲಿ ನಮ್ಮ ಭಾಗದ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುತ್ತಿಲ್ಲ ಸರಕಾರಕ್ಕೆ ಸೂಕ್ತ ಪ್ರಸ್ತಾವನೆ ಕಳಿಸುವಲ್ಲಿ ವಿಫಲರಾಗಿದ್ದಾರೆ. ಆದ್ದರಿಂದ ಇಂತಹ ವ್ಯವಸ್ಥೆ ತೊಡೆದು ಹಾಕಲು ಈ ಪ್ರತಿಭಟನೆಯು ಬೆ.8 ಗಂಟೆ ಯಿಂದ ಸಾ.6 ಗಂಟೆವರೆಗೆ ನಡೆಯಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಶ್ರೀ ಕಲ್ಪವೃಕ್ಷ ಸಂಜೀವಿನಿ ಮಹಿಳಾ ಒಕ್ಕೂಟದ ಉಪಾಧ್ಯಕ್ಷೆ ರೇಣುಕಾ ಜೋಗಿನ್,ಕಾರ್ಯದರ್ಶಿ ಶೋಭಾ ಬೀಳಗಿ,ಸದಸ್ಯ ರತ್ನಾ ಉಟಕನೂರು, ಶರಣಪ್ಪ ಜಡಿ ಉಪಸ್ಥಿತರಿದ್ದರು.

## ರಂಭಾಪುರಿ ಶ್ರೀಗಳ ಶರನ್ನವರಾತ್ರಿ ಅ.3ರಿಂದ

▶▶ಮೊದಲನೇ ಪುಟದಿಂದ

ಅ. 7ರರಂದು 'ಬಾಲಕ-ಪಾಲಕ-ಶಿಕ್ಷಕ ನೀತಿ ಸಂಹಿತೆ' ಕೃತಿ ಬಿಡುಗಡೆ ಜರುಗಲಿದೆ. ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ, ಅರಣ್ಯ ಸಚಿವ ಈಶ್ವರ ಖಂಡ್ರೆ ಮುಂತಾದವರು ಆಗಮಿಸುವರು. ಸಾವಯವ ಕೃಷಿ ಮಹತ್ವ ಕುರಿತು ಉಪನ್ಯಾಸ, ಗೌರವ ಶ್ರೀರಕ್ಷೆ, ಗುರು ರಕ್ಷೆ ಜರುಗಲಿದೆ.

ಅ. 8ರಂದು ವೀರಶೈವ ಸಿರಿ, ಕಾವ್ಯ ಕುಸುಮ ಕೃತಿಗಳ ಬಿಡುಗಡೆಗೊಳ್ಳಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಜಿ.ಎಸ್. ಪಾಟೀಲ, ನೇಮಿ ನಾಯಕ, ಸಂಗಣ್ಣ ಕರಡಿ, ಡಿ.ಆರ್. ಪಾಟೀಲ, ಆನಂದಸ್ವಾಮಿ ಗಡ್ಡದೇವರಮಠ ಆಗಮಿಸುವರು.

ಅ. 9ರಂದು 'ಶಿವಾಚಾರ್ಯ ರತ್ನ' ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಸಂಸದ ಪಿ.ಸಿ. ಗದ್ದಿಗೌಡ್ರ, ಶಾಸಕ ಜಗದೀಶ ಗುಡಗುಂಟಿಮಠ, ಶರಣು ಸಲಗರ ಆಗಮಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ನರೇಗಲ್ಲದ ಮಲ್ಲಿಕಾರ್ಜುನ ಶಿವಾಚಾರ್ಯರು, ಚಂದ್ರು ಬಾಳಿಹಳ್ಳಿಮಠ, ವಿರೇಶ ಕೂಗು, ವಿ.ಬಿ. ಸೋಮನಕಟ್ಟಿಮಠ ಮುಂತಾದವರು ಹಾಜರಿದ್ದರು.

## ಅನಿರ್ದಿಷ್ಟಾವಧಿ ಧರಣಿ ಅ.4ರಿಂದ

▶▶ಮೊದಲನೇ ಪುಟದಿಂದ

ವರ್ಗಾವಣೆಗೆ ನಡೆಸುತ್ತಿರುವ ಕೌನ್ಸಿಲಿಂಗ್ ಪದ್ಧತಿಯಲ್ಲೂ ಹಲವು ಲೋಪಗಳಿವೆ. ಇಲಾಖೆಯ ಶೋಷಣೆಗಳಿಂದ ರಾಜ್ಯದಲ್ಲಿ ಕಳೆದೊಂದು ವರ್ಷದಲ್ಲಿ 21 ಪಿಡಿಓಗಳು ಪ್ರಾಣ ಕಳೆದುಕೊಂಡಿದ್ದಾರೆ. ಇದರಿಂದ ಅವರ ಕುಟುಂಬಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಿದ್ದು, ಸಾಮೂಹಿಕ ರಾಜೀನಾಮೆಗೆ ಪಿಡಿಓಗಳು ತಯಾರಿ ನಡೆಸುತ್ತಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಹಾಂತೇಶ ಖೋತ, ಅಶ್ವಿನಿ ಕುರುಡಗಿ, ಮಹಾಂತೇಶ ತಳವಾರ, ಸವಿತಾ ಸೋಮಣ್ಣವರ, ಶಿವಲೀಲಾ ಗೂಳಪ್ಪನವರ, ಮಾಲತೇಶ ಮೇವುಂಡಿ, ಎಚ್.ಎಸ್. ಚಟ್ರಿ, ಸಂತೋಷ ಹೂಗಾರ, ಮಂಜುನಾಥ ಗಣಿ, ಲೋಹಿತ ಎಂ., ಎಸ್. ವೈ. ಕುಂಬಾರ, ಯಲ್ಲಪ್ಪ ಕೋರಿ, ವಸಂತ ಗೋಕಾಕ, ಪಕ್ರುದ್ದಿನ್ ನದಾಫ್, ಪ್ರದೀಪ ಆಲೂರ ಇದ್ದರು.

## ಸಾಧಿಸುವ ಛಲವಿದ್ದರೆ ಮಾತ್ರ ಯಶಸ್ಸು

▶▶ಮೊದಲನೇ ಪುಟದಿಂದ

ಮಹಾನಗರಗಳಲ್ಲಿ ಜೀವನ ಮಾಡಬೇಕೆಂದರೆ ಗಂಡ-ಹೆಂಡತಿ ಇಬ್ಬರೂ ಕೆಲಸ ಮಾಡುವ ಅನಿವಾರ್ಯತೆಯಿದೆ. ದುಡ್ಡಿದ್ದ-ರೆ ಸಮಾಜದಲ್ಲಿ ಗೌರವ ಹೆಚ್ಚಾಗುತ್ತದೆ. ಅಲ್ಲದೇ ಸ್ವಾಭಿಮಾನ ಹೆಚ್ಚಳವಾಗುತ್ತದೆ. ಉದ್ಯೋಗ ಒಂದು ಘನತೆಯನ್ನು ತಂದು-ಕೊಡುತ್ತದೆ. ಮೊದಲು ಭಾರತದ ಜನಸಂಖ್ಯೆಯ ಬಗ್ಗೆ ಬಹಳ ಕಳವಳ ವ್ಯಕ್ತಪಡಿಸುತ್ತಿದ್ದರು. ಜನಸಂಖ್ಯೆ ನಿಯಂತ್ರಿಸಬೇಕು ಎಂದು ಹೇಳುತ್ತಿದ್ದರು. ನಮ್ಮ ಪ್ರಧಾನಿಗಳು ಜನಸಂಖ್ಯೆಯಿಂದಲೇ ನಮ್ಮ ದೇಶದ ಆರ್ಥಿಕತೆ ಹೆಚ್ಚಿಸಲು ಸಾಧ್ಯ ಎಂದು ತಿಳಿಸಿದ್ದಾರೆಂದರು.

ಸಮಾಜದಲ್ಲಿ ಶಿಕ್ಷಣ, ಉದ್ಯೋಗ ನೀಡುವ ಮೂಲಕ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಅವರು ಯುವಕರಿಗೆ ದಾರಿದೀಪವಾಗಿ ಕೆಲಸ ಮಾಡುತ್ತಿದ್ದಾರೆ. ಅವರು ಮಾಡುತ್ತಿರುವ ಕಾರ್ಯ ಮಹಾನ್ ಕಾರ್ಯ. ಸಂಕನೂರು ಅವರ ದೂರದೃಷ್ಟಿಯಿಂದ ಗದಗನಲ್ಲಿ ನಿರಂತರವಾಗಿ ಕೆಲಸಗಳು ನಡೆಯುತ್ತಿವೆ. ಅವರು ಬದ್ಧತೆಯಿಂದ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶಾಸಕರಾದ ಸಿ.ಸಿ. ಪಾಟೀಲ್, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಸೇರಿದಂತೆ ವಿವಿಧ ಕಂಪನಿಗಳ ಮುಖ್ಯಸ್ಥರು ಹಾಜರಿದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಗೆ ಬರುವ 2022-23ನೇ ಸಾಲಿನ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ. ಬಿ ಆರ್ ಅಂಬೇಡ್ಕರ್ ನಿವಾಸ ಯೋಜನೆಯ ಒಟ್ಟು 500 ಹೆಚ್ಚುವರಿ ಗುರಿ ಮನೆಗಳಿಗೆ ನಿಗದಿಪಡಿಸಿದ್ದು ಇರುತ್ತದೆ.

ವಿವರ ಈ ಕೆಳಗಿನಂತೆ ಇದೆ : ಡಾ. ಬಿ.ಆರ್. ಅಂಬೇಡ್ಕರ್ ನಿವಾಸ ಯೋಜನೆ - ಗುರಿ - ಪರಿಶಿಷ್ಟ ಜಾತಿ 86, ಪರಿಶಿಷ್ಟ ಪಂಗಡ 35; ವಾಜಪೇಯಿ ನಗರ ವಸತಿ ಯೋಜನೆ - ಸಾಮಾನ್ಯ 329 , ಅಲ್ಪಸಂಖ್ಯಾತರು- 50. ಸದರಿ ಗುರಿಗಳ ಪ್ರಕಾರ ಫಲಾನುಭವಿಗಳ ಆಯ್ಕೆಗಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಫಲಾನುಭವಿಗಳ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಅಕ್ಟೋಬರ್ 20 ಆಗಿರುತ್ತದೆ.

ಬೇಕಾಗಿರುವ ದಾಖಲಾತಿಗಳು : ನಿಗದಿತ ನಮೂನೆ ಅರ್ಜಿ, ಸ್ವಂತ ಖಾಲಿ ನಿವೇಶನ ಉತಾರ (ಫಾರಂ ನಂ 3 ಚಾಲ್ತಿಯಲ್ಲಿ ಇರುವ) ರೇಶನ್ ಕಾರ್ಡ್ (ಬಿ.ಪಿ.ಎಲ್), ಚುನಾವಣೆ ಗುರುತಿನ ಚೀಟಿ, ಜಾತಿ ಮತ್ತು ಆದಾಯ ( ಚಾಲ್ತಿಯಲ್ಲಿರುವ), 2 ಪಾಸ್‌ಪೋರ್ಟ್ ಸೈಜ್ ಫೋಟೋ, ಬ್ಯಾಂಕ್ ಪಾಸ್ ಬುಕ್ ಪ್ರತಿ (ಚಾಲ್ತಿಯಲ್ಲಿರುವ) ಆಧಾರ್ ಕಾರ್ಡ್.

# 54ನೇ ಶಿವಾನುಭವಗೋಷ್ಠಿ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ, ಅಕ್ಷರ ಭಾರತ ಪ್ರತಿಷ್ಠಾನ ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಇವುಗಳ ಸಂಯುಕ್ತ ಆಶ್ರಯದಲ್ಲಿ 54ನೇ ಶಿವಾನುಭವ ಗೋಷ್ಠಿಯು ಅಕ್ಟೋಬರ್ 1ರಂದು ಸಂಜೆ 6.30ಕ್ಕೆ ಜರುಗಲಿದೆ.

ಶಿವಾನುಭವ ಗೋಷ್ಠಿಯ ದಿವ್ಯ ಸಾನ್ನಿಧ್ಯವನ್ನು ಮುಪ್ಪಿನ ಬಸವಲಿಂಗ ಸ್ವಾಮೀಜಿ ವಹಿಸಲಿದ್ದಾರೆ. ಉಪನ್ಯಾಸಕರಾಗಿ ಬದಾಮಿಯ ವೀರ ಪುಲಕೇಶಿ ಕಾಲೇಜಿನ ಸಹ ಪ್ರಾಧ್ಯಾಪಕ ಶಶಿಧರ ಎಸ್.ಮೂಲಿಮನಿ ಆಗಮಿಸಿ, 'ಸಾತ್ವಿಕ ಜೀವನವೇ ಯಶಸ್ಸಿನ ಸೋಪಾನ' ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಲಿದ್ದಾರೆ ಎಂದು ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಳಿಕಾ ದೇವಸ್ಥಾನದಲ್ಲಿ ನವರಾತ್ರಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಾಳಿಕಾದೇವಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಅಂಗವಾಗಿ ಅ.3ರ ಸಂಜೆ 5 ಗಂಟೆಗೆ ಘಟಸ್ಥಾಪನಾ, 6.30ಕ್ಕೆ ಶ್ರೀ ದೇವಿ ಪುರಾಣ ಪ್ರಾರಂಭ, ಅ. 9ರಂದು ಸಮಾಜದ ಮಹಿಳೆಯರು, ಕುಮಾರಿಯರಿಂದ ರಂಗೋಲಿ ಸ್ಪರ್ಧೆ, ಅ.11ರಂದು ದುರ್ಗಾಷ್ಟಮಿ, ಆಯುಧ ಪೂಜೆ, ಬೆಳಿಗ್ಗೆ 9 ಗಂಟೆಗೆ ಕುಂಕುಮಾರ್ಚನೆ ಪೂಜೆ, ಸಂಜೆ 5.30ಕ್ಕೆ ಸಮಾಜದ ಮಹಿಳೆಯರಿಂದ ಉಡಿ ತುಂಬುವ ಕಾರ್ಯಕ್ರಮ, ಅ. 12ರ ಸಂಜೆ 6.30ಕ್ಕೆ ಶ್ರೀ ದೇವಿ ಪುರಾಣ ಮಂಗಲ, ಪಾಲಕಿ ಸೇವಾ, ಬನ್ನಿ ಮುಡಿಯುವ ಕಾರ್ಯಕ್ರಮ ನೆರವೇರಲಿದೆ.

ಸಮಾಜದ ಸದ್ಭಕ್ತರೆಲ್ಲರೂ ಆಗಮಿಸಿ ಶ್ರೀ ಕಾಳಿಕಾ ಮಾತೆಯ ಕೃಪೆಗೆ ಪಾತ್ರರಾಗಬೇಕಾಗಿ ಪ್ರಕಟಣೆಯಲ್ಲಿ ವಿನಂತಿಸಲಾಗಿದೆ.

### ಅಮೃತ್-2 ಯೋಜನೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಶಾಸಕ ಜಿ.ಎಸ್. ಪಾಟೀಲ ಸೂಚನೆ

# ಕಾಮಗಾರಿ ಸುದೀರ್ಘ ಬಾಳಿಕೆ ಬರುವಂತಾಗಬೇಕು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ಅಮೃತ-2 ಯೋಜನೆ ಕಾಮಗಾರಿಗೆ ಸಂಬಂಧಿಸಿದಂತೆ ಪುರಸಭೆಯಲ್ಲಿ ಮತ್ತೊಂದು ಸಭೆ ನಡೆಯುವರೆಗೆ ಕಾಮಗಾರಿ ನಿಲ್ಲಿಸಿ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಪುರಸಭೆ ಸಭಾಭವನದಲ್ಲಿ ಸೋಮವಾರ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಪಟ್ಟಣದಲ್ಲಿ ನಡೆಯುತ್ತಿರುವ ಅಮೃತ-2 ಯೋಜನೆಯನ್ನು ವೈಜ್ಞಾನಿಕ ಮಾದರಿಯಲ್ಲಿ ನಡೆಸುತ್ತಿಲ್ಲ ಎನ್ನುವ ಸದಸ್ಯರ ಆರೋಪ ಹಿನ್ನಲೆಯಲ್ಲಿ ಅಧಿಕಾರಿಗಳನ್ನು ಶಾಸಕರು ತರಾಟೆಗೆ ತಗೆದುಕೊಂಡರು.

ಪಟ್ಟಣದಲ್ಲಿ ನಡೆಯುತ್ತಿರುವ ಕಾಮಗಾರಿ ಸುದೀರ್ಘ ಬಾಳಿಕೆ ಬರುವಂತಾಗಬೇಕು. ಪಟ್ಟಣದ 23 ವಾರ್ಡ್‌ಗಳಲ್ಲಿ ಕಾಮಗಾರಿ ನಡೆಯಲಿದ್ದು, ಹಂತ ಹಂತವಾಗಿ ಕಾಮಗಾರಿ ಮುಗಿದ ಬಳಿಕ ಇನ್ನೊಂದು ವಾರ್ಡ್‌ಗೆ ತೆರಳಬೇಕು. ಕಾಮಗಾರಿ ನಡೆಸುವ ವೇಳೆ ಆಯಾ ವಾರ್ಡಿನ ಸದಸ್ಯರ ಗಮನಕ್ಕೆ ತರಬೇಕು. ಅಲ್ಲದೆ ಮುಂದಿನ



ಸಭೆಗೆ ಮುಖ್ಯ ಗುತ್ತಿಗೆದಾರರು ಆಗಮಿಸಿ ಕಾಮಗಾರಿಯ ಸಂಪೂರ್ಣ ಮಾಹಿತಿ ನೀಡುವವರೆಗೆ ಕಾಮಗಾರಿ ಸ್ಥಗಿತಗೊಳಿಸಿ ಎಂದು ಸೂಚಿಸಿದರು.

ಪಟ್ಟಣದಲ್ಲಿ 2023-24ನೇ ಸಾಲಿನ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನ ಯೋಜನೆಯಡಿ ನಡೆಸುವ ಕಾಮಗಾರಿಗಳನ್ನು ನಡೆಸಲು ಸಭೆಯ ಅನುಮತಿ ಕೇಳಿದಾಗ ಸದಸ್ಯ ಮುರ್ತುಜಾ ಡಾಲಾಯತ್, ಕಳೆದ ಸಭೆಯಲ್ಲಿ ಕಳಪೆ ಕಾಮಗಾರಿ ಆರೋಪದ ಹಿನ್ನೆಲೆಯಲ್ಲಿ ಮಹೇಶ ಪಾಟೀಲ ಹಾಗೂ ಬಸವರಾಜ ಬಂಕದ ಅವರಿಗೆ ಕಾಮಗಾರಿ ನೀಡಬಾರದೆಂದು ಠರಾವು ಪಾಸ್ ಮಾಡಲಾಗಿದೆ. ಆದರೆ ಈಗ ಬಿಲೋ ಹೋಗಿದ್ದಾರೆ ಎಂದು ಮತ್ತೆ ಅವರಿಗೆ ಗುತ್ತಿಗೆ ನೀಡಿದರೆ ಕಳಪೆ ಕಾಮಗಾರಿ ಆದರೆ ಯಾರು ಹೊಣೆ ಎಂದು ಪ್ರಶ್ನಿಸಿದಾಗ, ಮುದಿಯಪ್ಪ ಮುಧೋಳ, ಉಮೇಶ ರಾಠೋಡ ಧ್ವನಿಗೂಡಿಸಿದರು.

> ಪಟ್ಟಣದ ಪೌರ ಕಾರ್ಮಿಕರಿಗೆ ಬೆಳಗಿನ ಉಪಹಾರ ಪೂರೈಸಲು, 7 ಶುದ್ಧ ಕುಡಿಯುವ ನೀರಿನ ಘಟಕಗಳ ವಾರ್ಷಿಕ ನಿರ್ವಹಣೆಗೆ ಟೆಂಡರ್, ಠರಾವ್ ಸಂಖ್ಯೆ 89ರಲ್ಲಿ ಎಸ್‌ಎಫ್‌ಸಿ ರೂ.24.10 ಯೋಜನೆಯ 2017-18 & 2018-19ನೇ ಸಾಲಿನಲ್ಲಿ ಉಳಿಕೆ ಮೊತ್ತಕ್ಕೆ ಪ.ಪಂಗಡ ಜನಾಂಗದವರಿಗೆ ಸಣ್ಣ ಉದ್ಯಮ ನಡೆಸಲು ಸಹಾಯಧನಕ್ಕೆ ಪರಿಷ್ಕೃತ ಕ್ರಿಯಾ ಯೋಜನೆ ತಯಾರಿಸಲು, ಬೀದಿ ದೀಪ ನಿರ್ವಹಣೆ, ಬೀದಿ ದನ ಹಾಗೂ ಬೀದಿ ನಾಯಿಗಳ ಹಾವಳಿ ತಪ್ಪಿಸಲು ಮತ್ತು ತೆರವುಗೊಳಿಸಲು, ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಜಾಗೆ, ಮಹಾವೀರ ಜೈನ ಸಮುದಾಯ ಭವನಕ್ಕೆ ನಿವೇಶನ ಒದಗಿಸಲು, ತಾ.ಪಂ ಕಟ್ಟಡ ನಿರ್ಮಾಣಕ್ಕೆ ಜಾಗ, ರೋಣದಿಂದ ಗಜೇಂದ್ರಗಡ ತಾಲೂಕಿಗೆ ಸ್ಥಳಾಂತರವಾದ ಸರ್ಕಾರಿ ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಸತಿ ನಿಲಯಕ್ಕೆ ಹಾಗೂ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಖಾಲಿ ನಿವೇಶನ ನೀಡಲು, ಪಟ್ಟಣದ 3 ರಸ್ತೆಗಳಲ್ಲಿ ಸ್ವಾಗತ ಬಾಗಿಲು ನಿರ್ಮಾಣಕ್ಕೆ ಅನುಮೋದನೆ ನೀಡಲಾಯಿತು.

ಕಾಮಗಾರಿಯ ಗುಣಮಟ್ಟದ ಜವಾಬ್ದಾರಿ ಹೊತ್ತುಕೊಳ್ಳುವದಾಗಿ ಪುರಸಭೆ ಅಭಿಯಂತರ ಉಮೇಶಗೌಡ ಓಜನಹಳ್ಳಿ ಹೇಳಿದಾಗ, ಕಾಮಗಾರಿ ಬಿಲ್ ಮಾಡುವಾಗ ಆಯಾ ವಾರ್ಡಿನ ಸದಸ್ಯರ ಗಮನಕ್ಕೆ ತಂದು ಬಿಲ್ ಮಾಡಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಅಭಿಯಂತರರಿಗೆ ತಾಕೀತು ಮಾಡಿದರು.

ಪುರಸಭೆ ಅಧ್ಯಕ್ಷ ಸುಭಾಸ ಮ್ಯಾಗೇರಿ, ಉಪಾಧ್ಯಕ್ಷೆ ಸವಿತಾ ಬಿದರಳ್ಳಿ, ಪ್ರಭಾರ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ, ಸದಸ್ಯರಾದ ಯಮನೂರ ತಿರ-ಕೋಜಿ, ರಾಜು ಸಾಂಗ್ಲಿಕರ, ಯು. ಆರ್. ಚನ್ನಮ್ಮನವರ, ಶಿವರಾಜ ಘೋರ್ಪಡೆ, ರೂಪೇಶ ರಾಠೋಡ, ಕನಕಪ್ಪ ಅರಳಿಗಿಡದ, ಮುರ್ತುಜಾ ಡಾಲಾಯತ, ಮುದಿಯಪ್ಪ ಮುಧೋಳ, ವೆಂಕಟೇಶ ಮುದಗಲ್, ವೀರಪ್ಪ ಪಟ್ಟಣಶೆಟ್ಟಿ, ಲಕ್ಷ್ಮೀ ಮುಧೋಳ, ಮುತ್ತಣ್ಣ ಮ್ಯಾಗೇರಿ, ರಫೀಕ್ ತೋರಗಲ್, ಬಸವರಾಜ ಹೂಗಾರ, ದ್ರಾಕ್ಷಾಯಿಣಿ ಚೋಳಿನ, ಲೀಲಾ ಸವಣೂರ, ದೀಪಾ ಗೌಡರ ಮುಂತಾದವರಿದ್ದರು.

### ಗದಗ ಜಿಲ್ಲಾ ಕುಡುಒಕ್ಕಲಿಗರ ಸಂಘದ ವಾರ್ಷಿಕ ಮಹಾಸಭೆ, ಸಾಧಕರಿಗೆ ಸನ್ಮಾನ

# ಕುಡುಒಕ್ಕಲಿಗರು ದಾನ-ಧರ್ಮಕ್ಕೆ ಹೆಸರಾದವರು

■ವಿಜಯಸಾಕ್ಷಿ ಸುದ್ದಿ, ಗದಗ

ಅಪೂರ್ಣಗೊಂಡಿರುವ ಗದುಗಿನ ಕುಡುಒಕ್ಕಲಿಗರ ಭವನ ನಿರ್ಮಾಣಕ್ಕೆ ಸರಕಾರದ ಅನುದಾನವನ್ನು ಒದಗಿಸುವದಾಗಿ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ರವಿವಾರ ಬಿಂಕದಕಟ್ಟಿ ಪ್ರಾಣಿಸಂಗ್ರಹಾಲಯದ ಹತ್ತಿರವಿರುವ ಕುಡುಒಕ್ಕಲಿಗರ ಭವನದಲ್ಲಿ ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘ ಕೇಂದ್ರ ಕಚೇರಿ ಗದಗ ಇದರ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರ, ಮಾಜಿ ಸೈನಿಕರ ಮತ್ತು ವಿಶೇಷ ಸಾಧಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕುಡುಒಕ್ಕಲಿಗ ಸಮಾಜ ಬಾಂಧವರು ದಾನಧರ್ಮಕ್ಕೆ ಹೆಸರಾದವರು. ಆದಾಗ್ಯೂ ಸಮುದಾಯ ಭವನ ಅಪೂರ್ಣಗೊಂಡಿದ್ದು, ಈ ಬಗ್ಗೆ ಸಮಾಜಬಾಂಧವರು ಸಂಘಟಿತರಾಗಿ ಅನುದಾನಕ್ಕೆ ಮುಂದಾದರೆ ಕ್ರಮ ಜರುಗಿಸುವದಾಗಿ ಹೇಳಿ, ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವ ಮೂಲಕ ಅವರನ್ನು ಪ್ರೋತ್ಸಾಹಿಸಿ ಉನ್ನತ ಶಿಕ್ಷಣಕ್ಕೆ ಅಣಿಗೊಳಿಸುವ ಪ್ರಯತ್ನ ಶ್ಲಾಘನೀಯ ಎಂದರು.

ರೈತ ಪರ ಹೋರಾಟಗಾರ, ಪ್ರಗತಿಪರ ರೈತ ಪರಮೇಶ್ವರಪ್ಪ





ಜಂತ್ಲಿ ಅವರಿಗೆ ಧಾರವಾಡ ಕೃಷಿ ವಿಶ್ವವಿದ್ಯಾಲಯವು ಶ್ರೇಷ್ಠ ಕೃಷಿಕ ಪ್ರಶಸ್ತಿ ನೀಡಿ ಅವರ ಕೃಷಿ ಸಾಧನೆಗೆ ಉತ್ತೇಜನ ನೀಡಿದ್ದು ಅಭಿನಂದನೀಯ. ಅವರ ಕೃಷಿ ಸಾಧನೆ ಹೀಗೆಯೇ ಮುನ್ನಡೆಯಲಿ. ಯುವ ಕೃಷಿಕರಿಗೆ ಮಾರ್ಗದರ್ಶನ ಪರಮೇಶ್ವರಪ್ಪ ಅವರಿಂದ ದೊರೆಯಲಿ ಎಂದರು.

ಮುಖ್ಯ ಅತಿಥಿ, ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಮಹಾಸಭಾದ ಅಧ್ಯಕ್ಷ ಬಿ.ಬಿ. ಪಾಟೀಲ ಮಾತನಾಡಿ, ಸಿರಸಂಗಿ ಲಿಂಗರಾಜರು ದಾನಗುಣಕ್ಕೆ ಹೆಸರಾದವರು. ಶಿಕ್ಷಣಕ್ಕೆ ಅವರು ಸಲ್ಲಿಸಿದ ಅನುಪಮ ಸೇವೆ ಸದಾಕಾಲ ಸ್ಮರಣೀಯವಾದದ್ದು ಎಂದರಲ್ಲದೆ, ಇಂದಿಗೂ ಬೆಳಗಾವಿಯ ನವಲಗುಂದ ಶಿರಸಂಗಿ ಟ್ರಸ್ಟ್ ಸಮಾಜದ ಪ್ರತಿಭಾನ್ವಿತ ಮಕ್ಕಳ ಶಿಕ್ಷಣಕ್ಕೆ ಆರ್ಥಿಕ ನೆರವು ನೀಡುತ್ತಿರುವದು ಸ್ವಾಗತಾರ್ಹ. ಸಮಾಜಬಾಂಧವರು ಟ್ರಸ್ಟ್‌ನ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಸನ್ಮಾನಿತರಾದ ಕೃಷಿ ಸಾಧಕ ಪರಮೇಶ್ವರಪ್ಪ ಜಂತ್ಲಿ ಮಾತನಾಡಿ, ನಾವೆಷ್ಟೇ ಶಿಕ್ಷಣ ಪಡೆದು ಉನ್ನತ ಹುದ್ದೆಯಲ್ಲಿದ್ದರೂ, ಶ್ರೀಮಂತಿಕೆ ಇದ್ದರೂ ಸಹ ಕೃಷಿಯ ಮುಂದೆ ಅದೆಲ್ಲ ಗೌಣ. ಭೂಮಿ ತಾಯಿಯನ್ನು ನಂಬಿದರೆ ಕೈಬಿಡುವುದಿಲ್ಲ. ಮೈಮುರಿದು ಕಷ್ಟಪಟ್ಟು ದುಡಿದರೆ ಫಲ ನಿಶ್ಚಿತ. ಸಣ್ಣ ಭೂಮಿಯಲ್ಲಿ ಕೃಷಿ ಮಾಡಿಕೊಂಡಿದ್ದ ನನಗೆ ಹಲವರು ಪ್ರೋತ್ಸಾಹ ನೀಡಿ ಸ್ಫೂರ್ತಿ ತುಂಬಿದರು. ಮಾರ್ಗದರ್ಶನ ಮಾಡಿದರು. ಅದರಿಂದಾಗಿ ನಾನು ಇಂದು ಕೃಷಿಯಲ್ಲಿ ಸಾಧನೆ ಮಾಡಲು ಅವಕಾಶವಾಯಿತು. ಹಾಗೆಯೇ ಇಂದಿನ ಯುವ ಜನಾಂಗ ಕಾಲೇಜು ಕಲಿತು ಖಾಲಿ ಕುಳಿತು ಸರ್ಕಾರಿ ನೌಕರಿಗಾಗಿ ಕಾಯದೇ ಕೃಷಿಯಲ್ಲಿ ಸಾಧನೆ ಮಾಡಿ ನಂಬಿದ ಭೂಮಿತಾಯಿ ಅನ್ನ ಕೊಡುವಳು ಎಂದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದುಕೊಂಡ ಸಮಾಜ 43 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವೇದಿಕೆಯ ಮೇಲೆ ಹಿರಿಯರಾದ ನಿಂಗಪ್ಪ ಹಳ್ಳದ, ಹಾಲೇಶ ಉಪನಾಳ, ವಸಂತಪ್ಪ ಕನಾಜ, ಸಿ.ಬಿ. ಹೊನ್ನಪ್ಪನವರ, ಗದಗ-ಬೆಟಗೇರಿ ನಗರಸಭೆಯ ಸದಸ್ಯ ಚಂದ್ರು ಕರಿಸೋಮನಗೌಡ್ರ ಉಪಸ್ಥಿತರಿದ್ದರು.

ಸಂಘದ ಕಾರ್ಯದರ್ಶಿ ಶರಣಪ್ಪ ದಿಡ್ಡಿಮನಿ ಸ್ವಾಗತಿಸಿದರು. ನಡುವಿನಮನಿ ಗುರುಗಳು ನಿರೂಪಿಸಿದರು. ಕೊನೆಗೆ ಸಿದ್ರಾಮಪ್ಪ ಗೋಜನೂರ ವಂದಿಸಿದರು. ಸಮಾರಂಭದಲ್ಲಿ ಗುಡೂರ ವಕೀಲರು, ವಸಂತಪ್ಪ ಗೋಜನೂರ, ಕರಿಚಣ್ಣವರ ಸೇರಿದಂತೆ ಸಮಾಜದ ಗಣ್ಯರು, ಹಿರಿಯರು ಪಾಲ್ಗೊಂಡಿದ್ದರು.

> ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಸರ್ವರ ಸಹಕಾರದೊಂದಿಗೆ ಸಂಘವನ್ನು ಪ್ರಗತಿಯಲ್ಲಿ ಮುನ್ನಡೆಸಿಕೊಂಡು ಬರಲಾಗಿದೆ. ಕುಡುಒಕ್ಕಲಿಗರ ಭವನ ನಿರ್ಮಾಣಕ್ಕೆ ಸಮಾಜಬಾಂಧವರು ಉದಾರ ಗುಣದಿಂದ ಮುಂದೆ ಬಂದರೆ ಶೀಘ್ರದಲ್ಲಿ ಬಾಕಿ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವದು ಎಂದು ಹೇಳಿ ಸಂಘದ ಪ್ರಗತಿಯ ವರದಿಯನ್ನು ಸಾದರಪಡಿಸಿದರು.

# 'ಲಕ್ಷ್ಮೇಶ್ವರದ ಸಾಮ್ರಾಟ'ನಿಗೆ ಸಂಭ್ರಮದ ವಿದಾಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ರಾಘವೇಂದ್ರಸ್ವಾಮಿಗಳ ಮಠದ ಹತ್ತಿರ ಶ್ರೀ ರಾಘವೇಂದ್ರ ಯುವಕ ಮಂಡಳದ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದ ಲಕ್ಷ್ಮೇಶ್ವರದ ಸಾಮ್ರಾಟ್ ಗಣೇಶನ ಮೂರ್ತಿಯ ವಿಸರ್ಜನೆ ಕಾರ್ಯಕ್ರಮವು ರವಿವಾರ ಸಡಗರ ಸಂಭ್ರಮದಿಂದ ಜರುಗಿ-ತು. ಪ್ರಸ್ತುತ ವರ್ಷದ ಪ್ರತಿಷ್ಠಾಪನೆ ರಜತಮಹೋತ್ಸವ ಆಚರಿಸಿಕೊಳ್ಳುತ್ತಿದ್ದು, ಸಾವಿರಾರು ಭಕ್ತರು ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಸಂಜೆಯ ವೇಳೆಗೆ ರಾಘವೇಂದ್ರಸ್ವಾಮಿಗಳ ಮಠದಿಂದ ಪ್ರಾರಂಭವಾದ ಮೆರಣಿಗೆಯು ಅದ್ದೂರಿಯಾಗಿ ಜರುಗಿತು. ಸಾವಿರಾರು ಜನರು ಬೃಹತ್ ಶೋಭಾಯಾತ್ರೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು. ಪಟ್ಟಣದಲ್ಲಿ ಸ್ಥಾಪಿಸಿರುವ ಎಲ್ಲ ಗಣೇಶನ ವಿಗ್ರಹಗಳಲ್ಲಿ ಇದು ಕೊನೆಯ ವಿಸರ್ಜನಾ ಕಾರ್ಯಕ್ರಮವಾಗಿರುವ ಹಿನ್ನೆಲೆಯಲ್ಲಿ ಹಳ್ಳಿಗಳಿಂದ ಸಾವಿರಾರು ಜನರು ಮೆರವಣಿಗೆಯಲ್ಲಿ ಪಾಲ್ಗೊಂಡು ಡಿಜೆ ಸದ್ದಿಗೆ ಹೆಜ್ಜೆ ಹಾಕಿ ಸಂಭ್ರಮಿಸಿದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್.ಬಿ. ಸಂಕದ ಅವರ ಮಾರ್ಗದರ್ಶನದಲ್ಲಿ ಡಿಎಸ್‌ಪಿ ಎ.ಎಚ್. ಇನಾಮದಾರ, ಡಿಎಆರ್ ಡಿಎಸ್‌ಪಿ, ಸಿಪಿಐ ನಾಗರಾಜ ಮಾಡಳ್ಳಿ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಸ್ಥಳದಲ್ಲಿ ಹಾಜರಿದ್ದು ಮಾರ್ಗದರ್ಶನ ನೀಡಿದರು. ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಈರಪ್ಪ ರಿತ್ತಿ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ ಹಾಗೂ ಸಿಬ್ಬಂದಿಗಳು ಬಂದೋಬಸ್ತ್ ಕಾರ್ಯವನ್ನು ಯಶಸ್ವಿಯಾಗಿ ನಿಭಾಯಿಸಿದರು.

# ಮಕ್ಕಳಿಗೆ ಶಿಕ್ಷಣವನ್ನು ನೀಡಿ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಶಿಕ್ಷಣ ಹಾಗೂ ಆರ್ಥಿಕತೆಯ ಕಡೆಗೆ ಗಮನವಹಿಸಿದರೆ ಸಮಾಜ ಅಭಿವೃದ್ಧಿ ಹೊಂದುತ್ತದೆ ಎಂದು ಕನಕ ಗುರುಪೀಠ ಕಾಗಿನೆಲೆಯ ನಿರಂಜನಾನಂದಪುರಿ ಮಹಾಸ್ವಾಮಿಗಳು ತಿಳಿಸಿದರು.

ತಾಲೂಕಿನ ಕಂಚೀಕೆರೆ ಗ್ರಾಮದಲ್ಲಿ ಭಾನುವಾರ ಬೀರೇಶ್ವರ ಸ್ವಾಮಿ ಜಾತ್ರೆಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಸಮಾಜದಲ್ಲಿ ನಾವು ಮುಖ್ಯವಾಹಿನಿಗೆ ಬರಲು ನಮ್ಮ ಮಕ್ಕಳಿಗೆ ಶಿಕ್ಷಣವನ್ನು ನೀಡಿ, ನ್ಯಾಯಯುತವಾಗಿ ಪ್ರತಿನಿತ್ಯ ದುಡಿಮೆಯನ್ನು ಮಾಡಿ ಆರ್ಥಿಕವಾಗಿ ಪ್ರಬಲರಾಗಿ, ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಮಾಡಿ ಉತ್ತಮ ಶಿಕ್ಷಣದ ಜೊತೆಗೆ ಉನ್ನತ ಹುದ್ದೆಗೆ ಸೇರಿಸಿ. ಹಣವನ್ನು ಯಾವ ರೀತಿಯಾಗಿ ಸದ್ಬಳಕೆ ಮಾಡಿಕೊಳ್ಳಬೇಕು ಎನ್ನುವ ಸಾಮಾನ್ಯ ಅರಿವು ನಮಗಿರಬೇಕು. ಕೌಟುಂಬಿಕ ಕಲಹಗಳು, ಅಶಾಂತಿ ನೆಲೆಸಿದಲ್ಲಿ ನಮ್ಮ ಮನಸಿನ ನೆಮ್ಮದಿಗಾಗಿ ಪ್ರಾರ್ಥನೆ ಮಾಡಿಕೊಳ್ಳಲು ದೇವಸ್ಥಾನಗಳು ಬೇಕು.

ದೇವಸ್ಥಾನದ ಗಂಟೆಯ ಬಡಿಯುವುದು ನಮ್ಮ ಕಾಯಕವಾಗಬಾರದು, ಅದರ ಬದಲಾಗಿ ಶಾಲೆಗಳಲ್ಲಿಯ ಗಂಟೆಯ ಶಬ್ದ ಮೊಳಗಲಿ. ಜೀವನದಲ್ಲಿ ಮುಖ್ಯವಾದ ಶಿಕ್ಷಣವಿದ್ದಾಗ ಸಮಾಜ, ರಾಜ್ಯ, ದೇಶಗಳ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ಉಪನ್ಯಾಸಕ ಗುಳಿಯಪ್ಪ ಹುಲಿಮನಿ ಮಾತನಾಡಿ, ನಮ್ಮ ಸಮಾಜವು ಇಂದಿಗೂ ಮುಂದುವರೆಯದೆ ಇರಲು ಕಾರಣ, ನಮ್ಮ ಮಕ್ಕಳಿಗಿರುವ ಶಿಕ್ಷಣದ ಕೊರತೆ. ಕೇವಲ ಕಷ್ಟಪಟ್ಟು ಶ್ರಮದಿಂದ ದುಡಿದರೆ ಸಾಲದು, ಆರ್ಥಿಕವಾಗಿ ಮುಂದುವರಿಯಲು ಶಿಕ್ಷಣ ಮುಖ್ಯವಾಗಿದೆ ಎಂದರು.

ಹೆಚ್.ಬಿ. ಪರುಸುರಾಮಪ್ಪ, ಎಂ.ನಾಗರಾಜ್, ಜೆ. ಮಂಜಪ್ಪ, ಕೆ. ಕೆಂಚಪ್ಪ, ಎಂ. ಹನುಮಂತಪ್ಪ, ಬಿ. ಅಂಜಿನಪ್ಪ, ಕೆಂಚನಗೌಡ, ಕೊಟ್ರೇಶ್, ಅಲ್ಲಾಭಕ್ಷಿ ಸಾಹೇಬ್, ಡಿ.ದೇವೇಂದ್ರಪ್ಪ, ಮುತ್ತಿಗೆ ಜಂಭಣ್ಣ, ವಕೀಲ ಗೋಣಿಬಸಪ್ಪ, ಚಲವಾದಿ ಹನುಮಂತಪ್ಪ, ವೆಂಕಟೇಶ್ ಬಾರಿಕರ, ಮಂಜಪ್ಪ, ಅರಸೀಕೆರೆ ಪಿಎಸ್‌ಐ ಕೆ. ರಂಗಯ್ಯ, ಸಮಾಜದ ಮುಖಂಡರು, ಗ್ರಾಮಸ್ಥರು ಹಾಜರಿದ್ದರು.

# ಪೇಂಟಿಂಗ್ ಅಸೋಶಿಯೇಶನ್ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯ ಲಲಿತ ಕಲಾ ಸಂಸ್ಥೆಯ ವಿಜಯ ಲಲಿತ ಕಲಾ ಕಾಲೇಜಿನಲ್ಲಿ ಪೇಂಟಿಂಗ್ ಅಸೋಶಿಯೇಶನ್ ವಿಭಾಗವನ್ನು ಎಂಒಯು ಅಡಿಯಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷರಾದ ಪ.ಸ. ಕುಮಾರ ಉದ್ಘಾಟಿಸಿದರು.

ಈ ಸಚಿದರ್ಭದಲ್ಲಿ ಮಾತನಾಡಿದ ಅವರು, ಕಲೆಗಳನ್ನು ಬೆಳೆಸಲು, ಕಲೆಗೆ ಮಹತ್ವ ಮತ್ತು ಮಾರುಕಟ್ಟೆ ನಿರ್ಮಿಸಲು ಕಲಾಕೃತಿಗಳ ಸಂಗ್ರಹ ಮಾಡುವದರ ಜೊತೆಗೆ ಮರುಕಟ್ಟೆಯ ವಿಧಾನ ಮತ್ತು ಬೇಡಿಕೆ ಕುರಿತು ಯುವ ಕಲಾವಿದರಿಗೆ ಮಾರ್ಗದರ್ಶನದ ಅವಶ್ಯವಿದೆ.

ವಿಶ್ವ ಮಾರುಕಟ್ಟೆ, ದೇಶ, ರಾಜ್ಯ, ಪ್ರಾದೇಶಿಕಗಳ ವೈವಿಧ್ಯತೆ ಅಲ್ಲಿಯ ಪ್ರೇಕ್ಷಕರ ನಾಡಿಯನ್ನು ಅರಿತು ಕಲಾಕೃತಿಯನ್ನು ಸಿದ್ದಪಡಿಸಬೇಕು. ಕಲೆಗೆ ಗ್ರಾಫಿಕ್ ಕ್ಷೇತ್ರದಲ್ಲಿ ಬಹು ಬೇಡಿಕೆಯೂ ಇದೆ. ಇಂತಹ ಪೇಂಟಿಂಗ್ ಅಸೋಶಿಯೇಶನ್‌ನಿಂದ ಕಾಲಮಾನದ ಕಲೆಯನ್ನು ತಿಳಿಯಲು ಸಾಧ್ಯ ಎಂದು ಹೇಳಿದರು

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಪ್ರೊ. ಅಶೋಕ ಅಕ್ಕಿ, ಕಲಾವಿದ ಡಾ.ಬಸವರಾಜ ಕಲೆಗಾರ, ಡಾ. ಸಿ.ವಿ. ಬಡಿಗೇರ, ಪ್ರೊ. ಬಿ.ಸಿ. ಕುತ್ನಿ, ಬಿ.ಜಿ. ನೆಲಜೇರಿ, ವಿದ್ಯಾರ್ಥಿ ವೃಂದದವರು ಉಪಸ್ಥಿತರಿದ್ದರು. ಪ್ರೊ. ಅಶೋಕ ಅಕ್ಕಿಯವರ ರೇಖಾಚಿತ್ರದ ಕಲಾಕೃತಿಗಳು, ನಿಸರ್ಗ ಕಲಾಕೃತಿಗಳು ಮತ್ತು ಹಿರಿ-ಕಿರಿಯರ ಕಲಾಕೃತಿಗಳನ್ನು ಸಂಗ್ರಹಿಸಲಾಗಿದೆ.




ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಬೆನಕನಕೊಪ್ಪ-582207 ತಾ॥ ನರಗುಂದ, ಜಿ॥ ಗದಗ**

ಇ-ಮೇಲ್ : benakanakoppa.nar.gdg@gmail.com

ಕ್ರ.ಸಂಖ್ಯೆ : ಗ್ರಾ.ಪಂ.ಬೆ/ಮ.ಗಾ.ರಾ.ಗ್ರಾ.ಉ.ಖಾ.ಯೋ/ದರಪಟ್ಟಿ/2024-25 ದಿನಾಂಕ : 20-09-2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೆನಕನಕೊಪ್ಪ ಇವರು 2024-25 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗೆ ಅವಶ್ಯವಿರು ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮುಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ಸಾಮಗ್ರಿ ಪೂರೈಕೆದಾರರಿಂದ ಕಾಮಗಾರಿವಾರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಕಛೇರಿ ಅವಧಿಯಲ್ಲಿ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿ ಹೆಸರು | ಅಂದಾಜು ಮೊತ್ತ | ಸಾಮಗ್ರಿ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|---|
| 01 | ಸಂಕದಾಳ ಗ್ರಾಮದ ಸರಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆ ಕಂಪೌಂಡ ಗೋಡೆ ನಿರ್ಮಾಣ | 200000=00 | 124650=00 | 1000 | ಖಾಲಿ ಟೆಂಡರ್ ಫಾರ್ಮ ಗ್ರಾಮ ಪಂಚಾಯತದಿಂದ ಪಡೆದು ಸಲ್ಲಿಸತಕ್ಕದ್ದು |

ಅರ್ಹ ಟೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ : **23-09-2024** ರಿಂದ **08-10-2024** ರ ಒಳಗಾಗಿ ಗ್ರಾಮ ಪಮಚಾಯತ ಕಾರ್ಯಾಲಯದ ಕಛೇರಿ ಸಮಯದಲ್ಲಿ ಪಡೆದು ದಿನಾಂಕ : **24-09-2024** ರಿಂದ **09-10-2024** ರೊಳಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಪ್ರತ್ಯೇಕವಾಗಿ ಕಾಮಗಾರಿವಾರು ಗ್ರಾಮ ಪಂಚಾಯತ ಕಛೇರಿಗೆ ಸಲ್ಲಿಸುವದು. ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಮೇಲ್ಕಂಡ ದಿನಾಂಕದೊಳಗೆ ಗ್ರಾಮ ಪಂಚಾಯತ ಕಾರ್ಯಾಲಯ ಬೆನಕನಕೊಪ್ಪದಲ್ಲಿ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ, ಬೆನಕನಕೊಪ್ಪ**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತ ಬೆನಕನಕೊಪ್ಪ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/263/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka